ಸಂಪುಟ : 9 ಸಂಚಿಕೆ 19 ಪುಟ : 4 ಬೆಲೆ : 3.00 ಶುಕ್ರವಾರ ಫೆಬ್ರವರಿ 16, 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 19 Pages : 4 Price : 3.00 Friday February 16, 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದಲ್ಲಿ ಫೆಬ್ರವರಿ 16ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

ಸ್ಥಳಗಳ ವಿವರ : ವಾರ್ಡ್ ನಂ. 7 ಪಂಚಲಕ್ಷ್ಮಿ ಬಡಾವಣೆ ಭಾಗ –1,2,3,4, ಶಿವಾಜಿನಗರ ಭಾಗ –1,2,3,4, ವಾರ್ಡ್ ನಂ.26 ಮೂರು ಶಿಳ್ಳಿನ ವಕಾರ, ಅಕ್ಕನ ಬಳಗದ ಲೈನ್, ಹಳೆ ಬಸ್ ಸ್ಟ್ಯಾಂಡ್ ಲೈನ್, ಪೊಲೀಸ್ ಸ್ಟೇಷನ್ ರೋಡ್, ಮಹೇಂದ್ರಕರ್ ಸರ್ಕಲ್ ಲೈನ್, ತೋಟದಾರ್ಯ ಮಠದ ಹಿಂದಿನ ಭಾಗಗಳು.

ವಾರ್ಡ್ ನಂ. 15,16,17 ಶಹಾಪುರ್ ಪೇಟೆ, ಜವಳಗಲ್ಲಿ, ಮೀನು ಮಾರ್ಕೆಟ್, ಅಂಗನವಾಡಿ ಲೈನ್, ಡಿಸಿ ಮಿಲ್ ರೋಡ್, ಗಾಂಧಿ ಸರ್ಕಲ್, ಭಜಂತ್ರಿ ಓಣಿ, ಬಸವೇಶ್ವರ ಗುಡಿ ಲೈನ, ಗಣೇಶ ಗುಡಿ ಲೈನ್ ಉಳಿದ ಭಾಗಗಳು. ವಾರ್ಡ್ ನಂ. 22 ಈಶ್ವರ ಗುಡಿ, ಗಿರಣಿ ಲೈನ್, ದಖನಿಯವರ ಲೈನ್, ಮೇದಾರ ಅವರ ಲೈನ್, ಧಾರವಾಡದವರ ಲೈನ್. ವಾರ್ಡ್ ನಂ. 16,18,19 ಮಡಿವಾಳರ ಲೈನ್, ಕುಂಬಾರ ಓಣಿ ಭಾಗ–1, 2, ಅಂಬೇಡ್ಕರ್ ನಗರ, ಹನುಮಂತ ದೇವರ ಗುಡಿ ಲೈನ್, ಕೊನೇರಿ ಹೊಂಡ ಹೊಸ ಲೈನ್, ಡೂರಗಲ್ಲಿ.

ಈಗಾಗಲೇ ಕುಡಿಯುವ ನೀರಿನ ನಳ ಹೊಂದಿರುವ ಬಾಕಿದಾರರ ಪಟ್ಟಿ ತಯಾರಿಸಿದ್ದು, ನಾಗರಿಕರು ಕೂಡಲೇ ತಮ್ಮ ಕುಡಿಯುವ ನೀರಿನ ಬಾಕಿ ಕರವನ್ನು ಸಂದಾಯ ಮಾಡುವಂತೆ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸರ್ಕಾರಿ ವಸತಿ ಶಾಲೆ, ಕಾಲೇಜುಗಳಲ್ಲಿ ಧಾರ್ಮಿಕ ಹಬ್ಬ ಆಚರಣೆಗೆ ಬ್ರೇಕ್

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕದ ಎಲ್ಲ ಸರ್ಕಾರಿ ವಸತಿ ಶಾಲೆ ಮತ್ತು ಕಾಲೇಜುಗಳಲ್ಲಿ ಧಾರ್ಮಿಕ ಹಬ್ಬಗಳ ಆಚರಣೆ ಮಾಡದಂತೆ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

### ದತ್ತಾ ಗ್ರುಪ್ ಆಯೋಜಿಸಿದ್ದ 'ಶ್ರೀನಿವಾಸ ಕಲ್ಯಾಣೋತ್ಸವ ಉದ್ಘಾಟಿಸಿದ ಮಾಜಿ ಸಚಿವ ಬಿ. ಶ್ರೀರಾಮುಲು

# ಒಗ್ಗಟ್ಟು, ಪ್ರಾಮಾಣಿಕತೆಯಿಂದ ಯಶಸ್ಸು

■ವಿಜಯಸಾಕ್ಷಿ ಸುದ್ದಿ, ಗದಗ

ದತ್ತಾ ಗ್ರುಪ್ ಶ್ರೀನಿವಾಸ ಕಲ್ಯಾಣೋತ್ಸವದ ಮೂಲಕ ಈ ಭಾಗದ ಜನರ ಕಷ್ಟಗಳು ದೂರಾಗಬೇಕು ಎನ್ನುವ ಸದುದ್ದೇಶ ಹೊಂದಿ ಅಭೂತಪೂರ್ವ ಕಾರ್ಯಕ್ರಮ ಆಯೋಜಿಸಿದೆ. ದತ್ತಾ ಗ್ರುಪ್ ಭವಿಷ್ಯದಲ್ಲಿ ಜನರ ವಿಶ್ವಾಸ ಉಳಿಸಿಕೊಂಡು ಮತ್ತಷ್ಟು ಅಭಿವೃದ್ಧಿ ಹೊಂದಲಿ ಎಂದು ಮಾಜಿ ಸಚಿವ ಬಿ. ಶ್ರೀರಾಮುಲು ಆಶಿಸಿದರು.

ಇಲ್ಲಿನ ವಿದ್ಯಾದಾನ ಸಮಿತಿ ಮೈದಾನದಲ್ಲಿ ಗುರುವಾರ ದತ್ತಾ ಗ್ರುಪ್ 5ನೇ ವಾರ್ಷಿಕೋತ್ಸವದ ನಿಮಿತ್ತ ಹಮ್ಮಿಕೊಂಡಿದ್ದ 'ಶ್ರೀನಿವಾಸ ಕಲ್ಯಾಣೋತ್ಸವ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ದತ್ತಾ ಗ್ರುಪ್ ಕೇವಲ 5 ವರ್ಷಗಳಲ್ಲಿ ಉತ್ತಮ ಕೆಲಸಗಳನ್ನು ಮಾಡಿ, ಸಮಾಜದ ಒಳಿತಿಗಾಗಿ ಶ್ರೀನಿವಾಸ ಕಲ್ಯಾಣೋತ್ಸವ ಹಮ್ಮಿಕೊಂಡಿದೆ. ಈ ಕಲ್ಯಾಣೋತ್ಸವ ಪ್ರತಿ ವರ್ಷ ನಡೆಯುವಂತಾಗಲಿ. ದೇವರು ಅವಕಾಶ ಕೊಟ್ಟಾಗ ಅದನ್ನು ಸದುಪಯೋಗ ಮಾಡಿಕೊಂಡು, ಒಗ್ಗಟ್ಟು, ಪ್ರಾಮಾಣಿಕತೆಯನ್ನು ಬೆಳೆಸಿಕೊಂಡಾಗ ದತ್ತಾ ಗ್ರುಪ್ ರೀತಿಯ ಸಂಸ್ಥೆಗಳು ಯಶಸ್ವಿಯಾಗುತ್ತವೆ ಎಂದರು.

ವಿ.ಪ ಮಾಜಿ ಸದಸ್ಯ ಮಹಾಂತೇಶ ಕವಟಗಿಮಠ ಮಾತನಾಡಿ, ದತ್ತಾ ಗ್ರುಪ್ ಸದಸ್ಯರು ಗಳಿಸಿದ ಹಣವನ್ನು ಸಮಾಜಮುಖಿ ಕೆಲಸಕ್ಕೆ ಬಳಸಿದ್ದಾರೆ. ಕಾಯಕದಿಂದ ಬಂದ ಹಣ ದಾಸೋಹಕ್ಕೆ ವಿನಿಯೋಗಿಸಿದ್ದು ಶ್ಲಾಘನೀಯ ಎಂದರು.



ಪ್ರಾಸ್ತಾವಿಕವಾಗಿ ಮಾತನಾಡಿದ ದತ್ತಾ ಗ್ರುಪ್ ವ್ಯವಸ್ಥಾಪಕ ನಿರ್ದೇಶಕ ಕಿರಣ್ ಭೂಮಾ, ದತ್ತಾ ಗ್ರುಪ್ 5 ವರ್ಷದಲ್ಲಿ 27 ಪ್ರಾಜೆಕ್ಟ್‌ಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದೆ. ವ್ಯವಹಾರದ ಜೊತೆಗೆ ಸಾಮಾಜಿಕ, ಧಾರ್ಮಿಕ ಕಾರ್ಯಕ್ರಮಗಳನ್ನೂ ಹಮ್ಮಿಕೊಂಡಿದೆ ಎಂದರು.

ಮಣಕವಾಡದ ಅಭಿನವ ಮಲ್ಲಿಕಾರ್ಜುನ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಮಾಜಿ ಶಾಸಕ ಡಿ.ಆರ್. ಪಾಟೀಲ, ಕೆಎಲ್‌ಇ ನಿರ್ದೇಶಕ ಶಂಕ್ರಣ್ಣ ಮುನವಳ್ಳಿ, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ, ಬಿಜೆಪಿ ಮುಖಂಡ ಉಮೇಶಗೌಡ ಪಾಟೀಲ, ಕಾಂಗ್ರೆಸ್ ಯುವ ನಾಯಕ ಕೃಷ್ಣಗೌಡ ಪಾಟೀಲ, ವಿದ್ಯಾದಾನ ಶಿಕ್ಷಣ ಸಂಸ್ಥೆ ಚೇರಮನ್ ಧೀರಣ್ಣ ಹುಯಿಲಗೋಳ, ಕಾನೂನು ವಿವಿ ಸಿಂಡಿಕೇಟ್ ಸದಸ್ಯ ವಸಂತ ಲದ್ವಾ, ಏಕನಾಥ ಇರಕಲ್ ವೇದಿಕೆಯ ಮೇಲಿದ್ದರು.

ಬಾಹುಬಲಿ ಜೈನರ ನಿರ್ವಹಿಸಿದರು. ದತ್ತಾ ಗ್ರುಪ್‌ನ ನಾರಾಯಣ ಕುಡತರಕರ, ಎಸ್.ಎಚ್. ಶಿವನಗೌಡರ, ರಾಘವೇಂದ್ರ ಬಾರಡ, ಸದಾಶಿವ ಚನ್ನಪ್ಪನವರ, ಜಹೀರ ತಾಡಪತ್ರಿ ಉಪಸ್ಥಿತರಿದ್ದರು. ಖ್ಯಾತ ಹರಿದಾಸ ಸಂಗೀತ ರತ್ನ ಪುತ್ತೂರು ನರಸಿಂಹ ನಾಯಕ್ ಅವರಿಂದ ದಾಸವಾಣಿ, ಸಂಗೀತ ಕಾರ್ಯಕ್ರಮ ಜನಮನ ರಂಜಿಸಿತು. ಬೆಂಗಳೂರು ಹಾಗೂ ತಿರುಪತಿಯ ಶ್ರೀ ಶ್ರೀವಾರಿ ಫೌಂಡೇಶನ್ ಅರ್ಚಕರು ಶ್ರೀನಿವಾಸ ಕಲ್ಯಾಣೋತ್ಸವ ನೆರವೇರಿಸಿದರು.

> ಸಾನ್ನಿಧ್ಯ ವಹಿಸಿದ್ದ ವೀರೇಶ್ವರ ಪುಣ್ಯಾಶ್ರಮದ ಕಲ್ಲಯ್ಯಜ್ಜನವರು ಮಾತನಾಡಿ, ಗದಗ ಸರ್ವಧರ್ಮ ಸಮನ್ವಯ, ದಾನ– ಧರ್ಮದ ಪುಣ್ಯಕ್ಷೇತ್ರವಾಗಿದೆ. ದತ್ತಾ ಗ್ರುಪ್ ಹಮ್ಮಿಕೊಂಡಿರುವ ಶ್ರೀನಿವಾಸ ಕಲ್ಯಾಣೋತ್ಸವ ಸಮಾಜದ ಕಲ್ಯಾಣೋತ್ಸವವಾಗಿದೆ. ಲೋಕ ಕಲ್ಯಾಣಕ್ಕಾಗಿ ಹಮ್ಮಿಕೊಂಡಿರುವ ಈ ಕಾರ್ಯಕ್ರಮ ಸರ್ವರಿಗೂ ಒಳಿತನ್ನು ಮಾಡಲಿ ಎಂದು ಶುಭ ಹಾರೈಸಿದರು.


### ಸರ್ವೋಚ್ಚ ನ್ಯಾಯಾಲಯದಿಂದ ಐತಿಹಾಸಿಕ ನಿರ್ಣಯ: ಸಚಿವ ಎಚ್.ಕೆ. ಪಾಟೀಲ

# ಎನ್‌ಡಿಎ ಸರ್ಕಾರಕ್ಕೆ ಸುಪ್ರೀಂ ಕಪಾಳಮೋಕ್ಷ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಚುನಾವಣಾ ಬಾಂಡ್‌ಗಳ ಅಸ್ತಿತ್ವವನ್ನೇ ಕಿತ್ತೆಸೆದಿರುವ ಸರ್ವೋಚ್ಚ ನ್ಯಾಯಾಲಯ ಈ ಬಾಂಡ್‌ಗಳು ಅಸಂವಿಧಾನಿಕ ಮತ್ತು ಸಂವಿಧಾನ ಬಾಹಿರವಾಗಿರುವ ಈ ಯೋಜನೆ ಮೂಲಭೂತ ಹಕ್ಕುಗಳ ಉಲ್ಲಂಘನೆ ಮಾಡುತ್ತದೆ ಎಂದು ಸರ್ವೋಚ್ಚ ನ್ಯಾಯಾಲಯ ಹೇಳಿರುವುದು ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರಕ್ಕೆ ಕಪಾಳಮೋಕ್ಷ ಮಾಡಿದೆ ಎಂದು ಕಾನೂನು, ನ್ಯಾಯ ಮಾನವ ಹಕ್ಕುಗಳು ಮತ್ತು ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ ಅಭಿಪ್ರಾಯಪಟ್ಟಿದ್ದಾರೆ.

ಅನಾಮಧೇಯ ನಿಧಿಯ ಮತ್ತು ಪರಸ್ಪರ ಕೊಡುಕೊಳ್ಳುವಿಕೆಯ ಕಾರ್ಪೋರೇಟ್ ವಲಯದಿಂದ ನಿಧಿ ಸಂಗ್ರಹಣೆ ಅತ್ಯಂತ ಅನೈತಿಕ ಕ್ರಮವಾಗಿದೆ. ದೇಣಿಗೆ ಹಣವನ್ನು ಆದಾಯ ತೆರಿಗೆ ಮತ್ತು ಜನತಾ ಪ್ರಾತಿನಿಧ್ಯ



ಕಾಯಿದೆಯಿಂದ ಹೊರಗಿಟ್ಟು ಅಕ್ರಮ ಸಂಪಾದನೆಯನ್ನು ರಾಜಕೀಯ ಪಕ್ಷಗಳ ಚುನಾವಣಾ ವೆಚ್ಚಕ್ಕೆ ಬಳಸಿಕೊಳ್ಳುವ ಕುತಂತ್ರದ ಭಾಗವಾಗಿರುವ ಯೋಜನೆಯನ್ನು ಸರ್ವೋಚ್ಚ ನ್ಯಾಯಾಲಯ ಸ್ಥಗಿತಗೊಳಿಸಿರುವುದು ಮತ್ತು ಅವುಗಳನ್ನು ಅಸಿಂಧು ಎಂದು ಘೋಷಿಸಿರುವುದು ಅತ್ಯಂತ ಸಮಂಜಸವಾದ ಐತಿಹಾಸಿಕ ನಿರ್ಣಯವಾಗಿದೆ.

ಈ ಚುನಾವಣಾ ಬಾಂಡ್‌ಗಳ ಮೂಲಕ ಬಿ.ಜೆ.ಪಿ ಪಕ್ಷವೇ ಅತಿ ಹೆಚ್ಚು ಹಣ ಸಂಗ್ರಹಿಸಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿಯವರ ಪಕ್ಷವಾಗಿರುವ ಬಿ.ಜೆ.ಪಿ ಯಾವ ಮೂಲದಿಂದ ಈ ಹಣ ಸಂಗ್ರಹಿಸಿದೆ ಎಂಬುದನ್ನು ಇ.ಡಿ.ಯವರು ತನಿಖೆ ನಡೆಸಬೇಕು. ಬಿ.ಜೆ.ಪಿ ಚುನಾವಣಾ ಬಾಂಡ್‌ಗಳ ಮೂಲಕ ಸಂಗ್ರಹಿಸಿದ ಈ ಅಕ್ರಮ ಹಣವನ್ನು ಚುನಾವಣಾ ಆಯೋಗ ತಕ್ಷಣವೇ ಮುಟ್ಟುಗೋಲು ಹಾಕಿಕೊಳ್ಳಬೇಕು. ದೇಶದಲ್ಲಿ ಅನೈತಿಕ ಸಂಪ್ರದಾಯವೊಂದನ್ನು ಶಾಸನಾತ್ಮಕವಾಗಿ ಜಾರಿಗೆ ತಂದ ಅಪಕೀರ್ತಿಯನ್ನು ಮತ್ತು ಇಂತಹ ಘೋರ ಅನೈತಿಕ ಕ್ರಮದ ಹೊಣೆಯನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಹೊತ್ತುಕೊಳ್ಳಬೇಕು.

ಪ್ರಜಾಸತ್ತಾತ್ಮಕ ವ್ಯವಸ್ಥೆಯಲ್ಲಿ ಉನ್ನತ ಸಂಪ್ರದಾಯಗಳನ್ನು ಮತ್ತು ಮೌಲ್ಯಗಳನ್ನು ಸಂರಕ್ಷಿಸುವ ಸಲುವಾಗಿ ಪ್ರಧಾನಮಂತ್ರಿ ಹುದ್ದೆಯನ್ನು ನರೇಂದ್ರ ಮೋದಿಯವರು ತಕ್ಷಣ ತ್ಯಜಿಸಿ ರಾಜಕೀಯ ವ್ಯವಸ್ಥೆಯಲ್ಲಿ ಸೂಕ್ತ ಮತ್ತು ನ್ಯಾಯಯುತ ಸಂಪ್ರದಾಯಕ್ಕೆ ನಾಂದಿ ಹಾಡಬೇಕೆಂದು ಅವರು ಒತ್ತಾಯಿಸಿದ್ದಾರೆ.

### ಸಂತ ಸೇವಾಲಾಲ್ ಜಯಂತಿ ಕಾರ್ಯಕ್ರಮ

# ಸೇವಾಲಾಲರ ಸಂದೇಶಗಳನ್ನು ಪಾಲಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಹುಬ್ಬಳ್ಳಿಯ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಕೇಂದ್ರ ಕಚೇರಿಯಲ್ಲಿ ಗುರುವಾರದಂದು ಶ್ರೀ ಸಂತ ಸೇವಾಲಾಲ್ ಮಹಾರಾಜರ ಜಯಂತಿ ಅಂಗವಾಗಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ದೀಪ ಬೆಳಗಿಸುವುದರ ಮೂಲಕ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಮುಖ್ಯ ಕಾರ್ಮಿಕ ಮತ್ತು ಕಲ್ಯಾಣಾಧಿಕಾರಿ ಪಿ ವೈ ನಾಯಕ ಮಾತನಾಡಿ, ಶ್ರೀ ಸಂತ ಸೇವಾಲಾಲ್ ಮಹಾರಾಜರ



ಜೀವನ ಮತ್ತು ಸಾಧನೆಗಳ ಕುರಿತು ತಿಳಿಸಿ ಸಂತ ಸೇವಾಲಾಲ್‌ರು ಬಂಜಾರ ಸಮುದಾಯದ ಆರಾಧ್ಯ ದೈವವಾಗಿದ್ದು, ಸಮುದಾಯದಲ್ಲಿನ ಮೂಢನಂಬಿಕೆಗಳನ್ನು ಹೊಡೆದೊಡಿಸಿದರು ಮತ್ತು ಹಲವಾರು ಪವಾಡಗಳನ್ನು ಮಾಡಿದರು. ಅವರು ಸದಾ ಎಲ್ಲರಿಗೂ ಒಳಿತನ್ನು ಮಾಡುವಂತೆ ಸಂದೇಶ ನೀಡುತ್ತಿದ್ದರು. ಇಂದು ನಾವೆಲ್ಲರು ಅವರ ಸಂದೇಶಗಳನ್ನು ಪಾಲಿಸುವುದು ಅವಶ್ಯವಿದೆ ಎಂದರಲ್ಲದೆ ಮತ್ತು ಅವರ ಜನ್ಮಸ್ಥಳ ಕರ್ನಾಟಕವಾಗಿದ್ದು ನಮ್ಮೆಲ್ಲರ ಹೆಮ್ಮೆ ಎಂದರು.

ಕಾರ್ಯಕ್ರಮದಲ್ಲಿ ಕೇಂದ್ರ ಕಚೇರಿಯ ಇಲಾಖಾ ಮುಖ್ಯಸ್ಥರಾದ ರಾಜೇಶ ಹುದ್ದಾರ, ಮುಖ್ಯ ಭದ್ರತಾ ಮತ್ತು ಜಾಗ್ರತಾಧಿಕಾರಿ, ವಿವೇಕಾನಂದ ವಿಶ್ವಜ್ಞ ಮುಖ್ಯ ಸಂಚಾರ ವ್ಯವಸ್ಥಾಪಕರು, ವಿಜಯಶ್ರೀ ನರಗುಂದ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ದಿವಾಕರ ಯರಗೊಪ್ಪ, ಮುಖ್ಯ ಕಾಮಗಾರಿ ಅಭಿಯಂತರರು, ಜಗದಂಬಾ ಕೋಪರ್ಡೆ, ಮುಖ್ಯ ಲೆಕ್ಕಾಧಿಕಾರಿ ಹಾಗೂ ಆರ್ಥಿಕ ಸಲಹೆಗಾರರು, ದಶರಥ ಕೆಳಗೇರಿ, ಉಪಮುಖ್ಯ ಭದ್ರತಾ ಹಾಗೂ ಜಾಗೃತಾಧಿಕಾರಿ, ಎಂ ಬಿ ಕಪಲಿ, ಉಪ ಮುಖ್ಯ ಗಣಕ ವ್ಯವಸ್ಥಾಪಕರು ಹಾಗೂ ಕೇಂದ್ರ ಕಚೇರಿಯ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

ವಿರೂಪಾಕ್ಷ ಕಟ್ಟಿಮನಿ ಪ್ರಾಸ್ತಾವಿಕವಾಗಿ ಮಾತನಾಡಿ ಕಾರ್ಯಕ್ರಮ ನಿರೂಪಿಸಿದರು.

### ವೀಕ್ಷಕರ, ಮಾರ್ಗಾಧಿಕಾರಿಗಳ ಮತ್ತು ತ್ರಿಸದಸ್ಯ ಸಮಿತಿ ನೇಮಕ

# ಫೆ. 18 ರಂದು ವಸತಿ ಶಾಲೆಗಳ ಪ್ರವೇಶಾತಿ ಪರೀಕ್ಷೆ

■ವಿಜಯಸಾಕ್ಷಿ ಸುದ್ದಿ, ಗದಗ

ಫೆಬ್ರುವರಿ 18ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಡಿ ಕಾರ್ಯನಿರ್ವಹಿಸುತ್ತಿರುವ ವಿವಿಧ ವಸತಿ ಸಂಘದ ವ್ಯಾಪ್ತಿಯಡಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ/ ಕಿತ್ತೂರು ರಾಣಿ ಚೆನ್ನಮ್ಮ/ ಡಾ. ಬಿ.ಆರ್. ಅಂಬೇಡ್ಕರ್ / ಅಟಲ್ ಬಿಹಾರಿ ವಾಜಪೇಯಿ/ ಶ್ರೀಮತಿ ಇಂದಿರಾ ಗಾಂಧಿ/ ಏಕಲವ್ಯ ಮಾದರಿ ವಸತಿ ಶಾಲೆಗಳಲ್ಲಿ 6ನೇ ತರಗತಿ ಪ್ರವೇಶಾತಿಗೆ ಲಭ್ಯವಾಗುವ ಸೀಟುಗಳಿಗೆ ಪರೀಕ್ಷೆಗಳನ್ನು ಜರುಗಿಸಲಿದೆ.

ಗದಗ ಜಿಲ್ಲೆಯಲ್ಲಿ ಒಟ್ಟು 20 ಪರೀಕ್ಷೆಗಳಿದ್ದು ಪರೀಕ್ಷೆಗಳು ಸುಗಮವಾಗಿ ಮತ್ತು ವ್ಯವಸ್ಥಿತವಾಗಿ ನಡೆಸಲು ಪ್ರತಿಯೊಂದು ಪರೀಕ್ಷಾ ಕೇಂದ್ರಕ್ಕೆ ವೀಕ್ಷಕರನ್ನು, ಮಾರ್ಗಾಧಿಕಾರಿಗಳ ಹಾಗೂ ತ್ರಿ ಸದಸ್ಯ ಸಮಿತಿಯನ್ನು ನೇಮಕ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

### ಸಂತ ಸೇವಾಲಾಲರ 285ನೇ ಜಯಂತ್ಯುತ್ಸವದಲ್ಲಿ ಯುವ ಮುಖಂಡ ಕೃಷ್ಣಗೌಡ ಎಚ್.ಪಾಟೀಲ

# ಯೋಗ್ಯ ಮಾರ್ಗದಲ್ಲಿ ಸ್ಪರ್ಧಾತ್ಮಕವಾಗಿ ಆಯ್ಕೆಯಾಗಿ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕಳಸಾಪೂರ ರಸ್ತೆಯ ಡಯಟ್ ಕಚೇರಿ ಹತ್ತಿರದಲ್ಲಿರುವ ಏಕಲವ್ಯ ನವೋದಯ ಕೋಚಿಂಗ್ ಕ್ಲಾಸಿಸ್‌ನಲ್ಲಿ ಸದ್ಗುರು ಸಂತ ಶ್ರೀ ಸೇವಾಲಾಲರ 285ನೇ ಜಯಂತ್ಯುತ್ಸವನ್ನು ಆಚರಿಸಲಾಯಿತು.

ಕಾರ್ಯಕ್ರಮವನ್ನು ಜಿಲ್ಲಾ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೃಷ್ಣಗೌಡ ಎಚ್.ಪಾಟೀಲ ಉದ್ಘಾಟಿಸಿ ಮಾತನಾಡಿ, ಗದಗ ಜಿಲ್ಲೆಯಲ್ಲಿ ವಿದ್ಯಾರ್ಥಿಗಳಿಗೆ ಇರುವ ಮೂಲಭೂತ ಸೌಕರ್ಯಗಳು ಬೇರೆ ಯಾವ ಜಿಲ್ಲೆಯಲ್ಲಿಯೂ ಇಲ್ಲ. ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ನಾವು ಇಂತಹ ಕೋಚಿಂಗ್ ಸೆಂಟರ್‌ನಲ್ಲಿ ಕೋಚಿಂಗ್ ಪಡೆದು ಮೆರಿಟ್‌ನಲ್ಲಿ



ಯಾವುದೇ ಶಾಲೆಗೆ ದಾಖಲಾತಿ ಪಡೆದುಕೊಳ್ಳಬೇಕು. ಪ್ರಭಾವಿಗಳ ಶಿಫಾರಸು ಪಡೆಯದೇ ಯೋಗ್ಯ ಶೈಕ್ಷಣಿಕ ತರಬೇತಿ ಪಡೆದುಕೊಂಡು ಸ್ಪರ್ಧಾತ್ಮಕವಾಗಿ ಆಯ್ಕೆಯಾಗಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ನಾಗಾವಿ ಗ್ರಾ.ಪಂ ಅಧ್ಯಕ್ಷ ಕುಬೇರಪ್ಪ ರಾಠೋಡ, ಕಾಂಗ್ರೆಸ್ ಹಿರಿಯ ಮುಖಂಡರಾದ ಬಸವರಾಜ ಕಡೇಮನಿ, ಶಿವರಾಜ ಕೋಟಿ, ಮಲ್ಲಿಕಾರ್ಜುನ ಖಂಡಮ್ಮನವರ, ಪಾಂಡಪ್ಪ ಲಮಾಣಿ, ಗದಗ ಜಿಲ್ಲಾ ಕಾಂಗ್ರೆಸ್ ಯುವ ಘಟಕದ ಅಧ್ಯಕ್ಷರಾದ ಅಶೋಕ ಮಂದಾಲಿ, ಪಾಂಡಪ್ಪ ದೇ. ಲಮಾಣಿ, ನೇಮಪ್ಪ ಲಮಾಣಿ, ಗೋವಿಂದಪ್ಪ ಪವಾರ, ವೀಣಾ ಈರಪ್ಪ ನಾಯಕ, ಚನ್ನಪ್ಪ ಲಮಾಣಿ, ಶೀತಲ ಲಮಾಣಿ, ವೀಣಾ ಚನ್ನಪ್ಪ ಲಮಾಣಿ, ರೋಹಿತ ನಾಯಕ ಉಪಸ್ಥಿತರಿದ್ದರು.

### ಜಿಲ್ಲಾಡಳಿತ ಭವನದಲ್ಲಿ ಸಂತ ಸೇವಾಲಾಲ್ ಜಯಂತಿ

# ಬಂಜಾರ ಸಮುದಾಯ ಪ್ರಾಮಾಣಿಕ ಸಮಾಜ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಸಂತ ಸೇವಾಲಾಲ್ ಜಯಂತಿಯನ್ನು ಆಚರಿಸಲಾಯಿತು. ಜಿಲ್ಲಾಧಿಕಾರಿ ವೈಶಾಲಿ.ಎಂ.ಎಲ್ ಅವರು ಸಂತ ಸೇವಾಲಾಲ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಗೌರವ ಸಲ್ಲಿಸಿದರು.

ನಂತರ ಮಾತನಾಡಿದ ಅವರು, ಬಂಜಾರ ಸಮುದಾಯದ ಆರಾಧ್ಯ ದೈವ ಸಂತ ಸೇವಾಲಾಲ್ ಜಯಂತಿಯ ಶುಭಾಶಯ ಕೋರಿದರು. ಸೇವಾಲಾಲ್ ಅವರ ತತ್ವಗಳು ಇಂದಿನ ಯುವಜನತೆಗೆ ದಾರಿ ದೀಪವಾಗಿದೆ. ಸರ್ಕಾರ ಸಂತ ಸೇವಾಲಾಲ್ ಜಯಂತಿಯನ್ನು




ಆಚರಿಸುವ ಮೂಲಕ ಅವರ ತತ್ವಾದರ್ಶಗಳನ್ನು ಇಂದಿನ ಯುವ ಜನತೆಗೆ ತಿಳಿಸಿಕೊಡುವ ಕಾರ್ಯ ಮಾಡುತ್ತಿದೆ. ಬಂಜಾರ ಸಮುದಾಯವು ಪ್ರಾಮಾಣಿಕ, ಕಾಯಕ ನಿಷ್ಠ ಸಮಾಜವಾಗಿದೆ. ಸಂತ ಸೇವಾಲಾಲ್‌ರ ನಿಷ್ಠೆ, ಪ್ರಾಮಾಣಿಕತೆ, ಆದರ್ಶಗಳನ್ನು ನಾವೆಲ್ಲರೂ ಅನುಸರಿಸುವ ಮೂಲಕ ಅವರಿಗೆ ಗೌರವ ಸಮರ್ಪಿಸೋಣ ಎಂದರು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ., ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ಪ್ರಶಾಂತ ವರಗಪ್ಪನವರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಹಿರೇಮಠ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ಸಿಬ್ಬಂದಿಗಳು, ಸಮಾಜದ ಗಣ್ಯರು, ಮುಖಂಡ ಉಪಸ್ಥಿತರಿದ್ದರು.

### ವಿಶ್ವಗುರು ಬಸವಣ್ಣ ಸಾಂಸ್ಕೃತಿಕ ನಾಯಕ

## ನಾಳೆ ಜಿಲ್ಲಾಡಳಿತ ಭವನದಲ್ಲಿ ಜಗಜ್ಯೋತಿ ಬಸವಣ್ಣನವರ ಭಾವಚಿತ್ರ ಅನಾವರಣ




■ವಿಜಯಸಾಕ್ಷಿ ಸುದ್ದಿ, ಗದಗ

ನಮ್ಮ ದೇಶದ ಸಂವಿಧಾನದ ಆಶಯಗಳಿಗೆ ವಿಶ್ವಗುರು ಬಸವಣ್ಣನವರ ಚಿಂತನೆಗಳು ಸಾಂಸ್ಕೃತಿಕ ರಾಯಭಾರಿತ್ವಕ್ಕೆ ಸಮರ್ಥನೀಯವಾಗಿ ನೆಲೆ ಒದಗಿಸಿರುವ ಮೇರೆಗೆ ಶ್ರೀ. ಜಗಜ್ಯೋತಿ ಬಸವಣ್ಣನವರನ್ನು ಕರ್ನಾಟಕದ ಸಾಂಸ್ಕೃತಿಕ ನಾಯಕನೆಂದು ರಾಜ್ಯ ಸರ್ಕಾರ ಘೋಷಿಸಿ ಆದೇಶ ಹೊರಡಿಸಿದೆ.

ಮುಖ್ಯಮಂತ್ರಿಗಳು ಫೆ.13 ರಂದು ವಿಧಾನ ಸೌಧದಲ್ಲಿ ವಿಶ್ವಗುರು ಬಸವಣ್ಣನವರ ಭಾವಚಿತ್ರವನ್ನು ಅನಾವರಣಗೊಳಿಸಿದ್ದು, ಅದರಂತೆ ಫೆ.17 ರಂದು ರಾಜ್ಯಾದ್ಯಂತ ಎಲ್ಲ ಜಿಲ್ಲಾ, ತಾಲೂಕು ಕೇಂದ್ರಗಳಲ್ಲಿ ವಿಶ್ವಗುರು ಬಸವಣ್ಣನವರ ಭಾವಚಿತ್ರವನ್ನು ಅನಾವರಣಗೊಳಿಸುವ ಕಾರ್ಯಕ್ರಮವನ್ನು ಆಯೋಜಿಸಲು ಸೂಚಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಫೆ.17 ಶನಿವಾರದಂದು ಮಧ್ಯಾಹ್ನ 12 ಗಂಟೆಗೆ ಗದಗ ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಕರ್ನಾಟಕದ ಸಾಂಸ್ಕೃತಿಕ ನಾಯಕರಾದ ಶ್ರೀ. ಜಗಜ್ಯೋತಿ ಬಸವಣ್ಣನವರ ಭಾವಚಿತ್ರದ ಅನಾವರಣ ಸಮಾರಂಭವನ್ನು ಆಯೋಜಿಸಲಾಗಿದೆ.

ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಜಗಜ್ಯೋತಿ ಬಸವಣ್ಣನವರ ಭಾವಚಿತ್ರ ಅನಾವರಣವನ್ನು ನೆರವೇರಿಸುವರು. ಅವರೊಟ್ಟಿಗೆ ಜಿಲ್ಲೆಯ ಜನಪತ್ರಿನಿಧಿಗಳು ಪಾಲ್ಗೊಳ್ಳುವರು.

ಕಾರ್ಯಕ್ರಮಕ್ಕೆ ಜಿಲ್ಲೆಯ ಬಸವ ಪರ, ವಿವಿಧ ಸಮುದಾಯದ ಸಂಘಟನೆಗಳು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಜಿಲ್ಲಾಧಿಕಾರಿ ವೈಶಾಲಿ.ಎಂ.ಎಲ್. ಕೋರಿದ್ದಾರೆ.

### ಧರ್ಮ ಸಂಸ್ಕೃತಿ ಪುನಶ್ಚೇತನ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಭೌತಿಕ ಬದುಕಿಗೆ ಸಂಪತ್ತಷ್ಟೇ ಮುಖ್ಯವಲ್ಲ

■ವಿಜಯಸಾಕ್ಷಿ ಸುದ್ದಿ, ಶಿಕಾರಿಪುರ

ಜ್ಞಾನ ಕ್ರಿಯಾತ್ಮಕವಾದ ಧರ್ಮ ಪಾಲನೆಯಿಂದ ಜಗದಲ್ಲಿ ಶಾಂತಿ ನೆಲೆಸಲು ಸಾಧ್ಯ. ಅಂತರಂಗ ಮತ್ತು ಬಹಿರಂಗ ಪರಿಶುದ್ಧಗೊಳಿಸುವ ಶಕ್ತಿ ಶ್ರೀ ಗುರುವಿಗೆ ಇದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ವಿಚಾರ ಧಾರೆ ಸರ್ವರಿಗೂ ದಾರಿದೀಪ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶಿಕಾರಿಪುರ ತಾಲೂಕ ಕಡೇನಂದಿಹಳ್ಳಿ ಕ್ಷೇತ್ರದ ಶ್ರೀ ಗುರು ರೇವಣಸಿದ್ಧೇಶ್ವರ ಪುಣ್ಯಾಶ್ರಮದಲ್ಲಿ ಜರುಗಿದ 36 ಅಡಿ ಎತ್ತರದ ಶ್ರೀ ಜಗದ್ಗುರು ರೇಣುಕಾಚಾರ್ಯರ ಪುತ್ಥಳಿ ಅನಾವರಣ, ಮಹಾಮಸ್ತಕಾಭಿಷೇಕ, ಪುಷ್ಪಾರ್ಚನೆ ನೆರವೇರಿಸಿದ ನಂತರ ಜರುಗಿದ ಧರ್ಮ ಸಂಸ್ಕೃತಿ ಪುನಶ್ಚೇತನ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಸಂಸ್ಕಾರ-ಸಂಸ್ಕೃತಿಗಳ ಮೂಲಕ ಅಂಗ ಅವಗುಣಗಳನ್ನು ದೂರ ಮಾಡಿ ಲಿಂಗ ಗುಣ ಬೆಳೆಸಲು ಶ್ರಮಿಸಿದವರು ರೇಣುಕಾಚಾರ್ಯರು. ಜೀವಾತ್ಮ ಪರಮಾತ್ಮನಾಗುವ ಅಂಗ ಲಿಂಗವಾಗುವ ಭವಿ ಭಕ್ತನಾಗುವ ಸಾಧನಾ ಮಾರ್ಗವನ್ನು ಬೋಧಿಸಿ ಜೀವನ ಉತ್ಕರ್ಷತೆಗೆ ಕಾರಣರಾದವರು ರೇಣುಕಾಚಾರ್ಯರು.



ಗಂಡು-ಹೆಣ್ಣು, ಉಚ್ಚ-ನೀಚ ಮತ್ತು ಬಡವ-ಬಲ್ಲಿದ ಎನ್ನದೇ ಎಲ್ಲರ ಶ್ರೇಯಸ್ಸಿಗಾಗಿ ಶ್ರಮಿಸಿದ್ದನ್ನು ಮರೆಯಲಾಗದು. ಭೌತಿಕ ಬದುಕಿಗೆ ಸಂಪತ್ತಷ್ಟೇ ಮುಖ್ಯವಲ್ಲ. ಅದರೊಂದಿಗೆ ಶಿವಜ್ಞಾನದ ಅರಿವು ಮೂಡಿಸುವುದು ಮುಖ್ಯವೆಂದು, ಆರೋಗ್ಯ ಪೂರ್ಣ ಸಮಾಜಕ್ಕೆ ಶ್ರಮಿಸಿದ ಕೀರ್ತಿ ಶ್ರೀ ಜಗದ್ಗುರು ರೇಣುಕಾಚಾರ್ಯರಿಗೆ ಸಲ್ಲುತ್ತದೆ ಎಂದರು.

ಇದೇ ಸಂದರ್ಭದಲ್ಲಿ ಶಿವಮೊಗ್ಗ ಕ್ಷೇತ್ರದ ಸಂಸದ ಬಿ.ವೈ. ರಾಘವೇಂದ್ರ ಅವರಿಗೆ 'ಶ್ರೀ ರಂಭಾಪುರಿ ಜಗದ್ಗುರು ರೇವಣಸಿದ್ಧೇಶ್ವರ' ರಾಷ್ಟ್ರೀಯ ಪ್ರಶಸ್ತಿ ಪ್ರದಾನ ಮಾಡಿ ಶುಭ ಹಾರೈಸಿದರು. ಪ್ರಶಸ್ತಿ ಸ್ವೀಕರಿಸಿದ ಬಿ.ವೈ. ರಾಘವೇಂದ್ರ ಕೃತಜ್ಞತಾ ಪೂರ್ವಕ ಮಾತುಗಳನ್ನಾಡಿದರು.

ಕಾರ್ಕಳದ ಶಿಲ್ಪಿ ಕೃಷ್ಣಾ ಆಚಾರ್ಯ, ಶಿವಮೊಗ್ಗ ಶಿಲ್ಪಿ ಜೀವನ್ ಕಲಾಸನ್ನಿಧಿ, ಶಿಕಾರಿಪುರ ಪ್ರಥಮ ದರ್ಜೆ ಗುತ್ತಿಗೆದಾರ ದೇವೇಂದ್ರಪ್ಪ ಇವರಿಗೆ ಪ್ರಶಸ್ತಿ ಮತ್ತು ಗುರುರಕ್ಷೆಯಿತ್ತು ಶ್ರೀ ರಂಭಾಪುರಿ ಜಗದ್ಗುರುಗಳು ಶುಭ ಹಾರೈಸಿದರು.

ಹಲವಾರು ಗಣ್ಯರು ಮತ್ತು ದಾನಿಗಳನ್ನು ಇದೇ ಸಂದರ್ಭದಲ್ಲಿ ಗೌರವಿಸಲಾಯಿತು.

ಬಿ.ಜೆ.ಪಿ. ಧುರೀಣ ಕೆ.ಎಸ್. ಗುರುಮೂರ್ತಿ ಮತ್ತು ಹೆಚ್.ಬಿ. ಬಳಿಗಾರ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ನೇತೃತ್ವ ವಹಿಸಿದ ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಸರ್ವರ ಸಹಕಾರ ಮತ್ತು ಶ್ರೀ ರಂಭಾಪುರಿ ಜಗದ್ಗುರುಗಳವರ ಆಶೀರ್ವಾದದಿಂದ ಎಲ್ಲಾ ಕಾರ್ಯಗಳು ಯಶಸ್ವಿಯಾಗಿ ಜರುಗಿದ್ದಕ್ಕೆ ಹರುಷ ವ್ಯಕ್ತಪಡಿಸಿದರು.

ಈ ಪವಿತ್ರ ಸಮಾರಂಭದಲ್ಲಿ ಕನ್ನೂರು-ಸಿಂಧನೂರು ಸೋಮನಾಥ ಶ್ರೀ, ಚನ್ನಗಿರಿ ಕೇದಾರ ಶಿವಶಾಂತವೀರ ಶ್ರೀ, ಹಾರನಹಳ್ಳಿ ಶಿವಯೋಗಿ ಶ್ರೀ, ಕಾರ್ಜುವಳ್ಳಿ ಸದಾಶಿವ ಶ್ರೀ, ಸಂಗೊಳ್ಳಿ ಗುರುಲಿಂಗ ಶ್ರೀಗಳು, ಕಡೆನಂದಿಹಳ್ಳಿ ವೀರಭದ್ರ ಶ್ರೀಗಳು ಸೇರಿದಂತೆ ಹಲವಾರು ಮಠಾಧೀಶರು ಉಪಸ್ಥಿತರಿದ್ದರು. ಶಿಕ್ಷಕ ನಾಗರಾಜ ಹುಲ್ಲಿನಕೊಪ್ಪ ಸ್ವಾಗತಿಸಿದರು. ಸವಣೂರಿನ ಡಾ. ಗುರುಪಾದಯ್ಯ ಸಾಲಿಮಠ ನಿರೂಪಿಸಿದರು. ಶಾಂತಾ ಆನಂದ ಪ್ರಾರ್ಥಿಸಿದರು.

ಕಾರ್ಯಕ್ರಮ ನಂತರ ಜ್ಞಾನೇಶ್ವರ ಬಳ್ಳಾರಿ, ಮೆಹಬೂಬ್ ಸಾಬ್ ಹರ್ಲಾಪುರ ಇವರಿಂದ ಸಾಂಸ್ಕೃತಿಕ ಸಂಗೀತ ಸೌರಭ ಜರುಗಿತು. ಕಾರ್ಯಕ್ರಮಕ್ಕೂ ಮುನ್ನ 36 ಅಡಿ ಎತ್ತರದ ಶ್ರೀ ಜಗದ್ಗುರು ರೇಣುಕಾಚಾರ್ಯರ ಮೂರ್ತಿಯನ್ನು ಶ್ರೀ ರಂಭಾಪುರಿ ಜಗದ್ಗುರುಗಳು ಲೋಕಾರ್ಪಣೆ ಮಾಡಿದರು.


ಇಂಥ ಭವ್ಯ ಸುಂದರ ಶ್ರೀ ಜಗದ್ಗುರು ರೇಣುಕಾಚಾರ್ಯರ ಪುತ್ಥಳಿ ನಿರ್ಮಿಸಿ ಲೋಕಾರ್ಪಣೆಗೈದ ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾಡಿದ ಸತ್ಕಾರ್ಯ ಎಲ್ಲರ ಮೆಚ್ಚುಗೆಗೆ ಪಾತ್ರರಾಗಿದ್ದಾರೆಂದು ಹರುಷ ವ್ಯಕ್ತಪಡಿಸಿ ಶ್ರೀಗಳವರಿಗೆ 'ಶಿವ ಪೂಜಾ ತಪೋರತ್ನ' ಪ್ರಶಸ್ತಿ ನೀಡಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಶುಭ ಹಾರೈಸಿದರು.

# ವಿವಿಧ ಶಾಲೆಗಳಲ್ಲಿ ಸಂತ ಸೇವಾಲಾಲರ ಜಯಂತಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಬೂದಿಹಾಳ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸಂತ ಸೇವಾಲಾಲ್‌ರ 285ನೇ ಜಯಂತಿಯನ್ನು ಆಚರಿಸಲಾಯಿತು. ಸೇವಾಲಾಲ್‌ರ ಭಾವಚಿತ್ರಕ್ಕೆ ಶಿಕ್ಷಕ ಸಿ.ಕೆ. ಕೇಸರಿಯವರು ಪೂಜೆ ಸಲ್ಲಿಸಿದರು.

ಶಿಕ್ಷಕ ಬಿ.ವಿ. ದೇಸಾಯಿಪಟ್ಟಿ ಮಾತನಾಡಿ, ಬಂಜಾರ ಸಮುದಾಯದ ಧರ್ಮಗುರುವಾಗಿದ್ದ ಸಂತ ಸೇವಾಲಾಲ್‌ರು ದಾವಣಗೆರೆ ಜಿಲ್ಲೆಯ ಹೊನ್ನಳ್ಳಿ ತಾಲೂಕಿನ ಬೆಳಗುತ್ತಿ ಹೋಬಳಿಯ ಸೂರಗೊಂಡನ ಕೊಪ್ಪ ಎಂಬಲ್ಲಿ ಭೀಮನಾಯಕ್, ಧರ್ಮಿಣಿಯಾಡಿ ಮಗನಾಗಿ 1739ರಲ್ಲಿ ಜನಿಸಿದರು. ಮೂಢ ನಂಬಿಕೆ ವಿರುದ್ಧ ಹೋರಾಡಿದ ವಿವೇಚನಾಶೀಲ ವ್ಯಕ್ತಿ ಹಾಗೂ ಜಗದಂಬಾ ದೇವಿಯ ಭಕ್ತರಾಗಿದ್ದಾರೆ ಎಂದರು.




ಶಿಕ್ಷಕಿ ಐಶ್ವರ್ಯ ಬಿಂಗಿ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

ಶ್ರೀ ಬಸವೇಶ್ವರ ಶಾಲೆಯಲ್ಲಿ: ಸ್ಥಳೀಯ ಶ್ರೀ ಬಸವೇಶ್ವರ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸಂತ ಸೇವಾಲಾಲ್‌ರ ಜಯಂತಿ ಆಚರಿಸಲಾಯಿತು. ಶಾಲೆಯ ಮುಖ್ಯೋಪಾಧ್ಯಾಯೆ ಬಿ.ಜಿ. ಶಿರ್ಸಿ, ಶಿಕ್ಷಕರಾದ ಎಸ್.ವಿ. ಹಿರೇಮಠ, ವ್ಹಿ.ಪಿ. ಗ್ರಾಮಪುರೋಹಿತ, ಎಸ್.ಕೆ. ಕುಲಕರ್ಣಿ, ಎಮ್.ವಿ. ಕಡೆತೋಟದ, ವಿ.ಎಸ್. ಜಾಧವ್, ಎಸ್.ಎಚ್. ಮಾನ್ವಿ, ಗೀತಾ ಶಿಂಧೆ, ಕೆ.ಆಯ್. ಕೋಳಿವಾಡ, ಆಯ್.ಬಿ. ಒಂಟೆಲಿ, ಎನ್.ಜೆ. ಸಂಗನಾಳ, ಜೆ.ವಿ. ಕೆರಿಯವರ, ಅಕ್ಕಮಹಾದೇವಿ, ಗೀತಾ ಕಂಬಳಿ, ರಜಿಯಾ ಬೇಗಂ, ಮಲ್ಲಮ್ಮ ಸಿಳ್ಳಿನ, ವಿದ್ಯಾ ಮುಗಳಿ, ಜಯಶ್ರೀ ಮೆಣಸಗಿ, ನಯನಾ ಜೋಳದ, ವೀಣಾ ಸೇರಿದಂತೆ ಸಿಬ್ಬಂದಿ ವರ್ಗದವರು ಹಾಜರಿದ್ದರು.

ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ: ಸ್ಥಳೀಯ ಸರಕಾರಿ ಹಿರಿಯ ಪ್ರಾಥಮಿಕ ಕನ್ನಡ ಹೆಣ್ಣು ಮಕ್ಕಳ ಶಾಲೆಯಲ್ಲಿ ಸಂತ ಸೇವಾಲಾಲ್ ಮಹಾರಾಜರ ಜಯಂತಿಯನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ ಶಿಕ್ಷಕಿ ಎನ್. ಎಲ್. ಚವ್ಹಾಣ ಮಾತನಾಡಿ, ಸಂತ ಸೇವಾಲಾಲರು ಸತ್ಯ, ಅಹಿಂಸೆ ಮೂಲಕ ಅನೇಕ ಸಂದೇಶಗಳನ್ನು ನೀಡಿದ್ದಾರೆ. ಸಮಾಜದ ಏಳಿಗೆಗಾಗಿ ನಿರಂತರವಾಗಿ ಶ್ರಮಿಸಿದ ಅವರ ಕೊಡುಗೆ ಅಪಾರವೆಂದರು.

ಮುಖ್ಯೋಪಾಧ್ಯಾಯ ಬಸವರಾಜ ಕುರಿ, ಶಿಕ್ಷಕರಾದ ಜೆ.ಎ. ಪಾಟೀಲ, ಎಂ.ಪಿ. ಅಣಗೌಡರ, ರಾಜೇಶ್ವರಿ ಕೊಂಡಿಹಾಳ, ವರ್ಷಾ, ಡಿ.ವಿ. ಕಳ್ಳಿ, ಎಮ್. ಎಸ್. ಮಾಳಶೆಟ್ಟಿ ಸೇರಿದಂತೆ ವಿದ್ಯಾರ್ಥಿಗಳು ಹಾಜರಿದ್ದರು.

# ಬಿಜೆಪಿ ನಗರ ಘಟಕದಿಂದ 'ಗಾಂವ್ ಚಲೋ' ಅಭಿಯಾನ



■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಹಾಗೂ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರ ಆದೇಶದ ಮೇರೆಗೆ ಗದಗ ನಗರ ಬಿಜೆಪಿಯಿಂದ ಜಿಲ್ಲಾಧ್ಯಕ್ಷ ರಾಜಣ್ಣ ಕುರುಡಗಿ ಅವರ ಸೂಚನೆಯಂತೆ 'ಗಾಂವ ಚಲೋ' ಅಭಿಯಾನದಲ್ಲಿ ಬೂತ್ ಅಧ್ಯಕ್ಷರು ಹಾಗು ಬೂತ್ ಸಮಿತಿ, ಚುನಾಯಿತ ಪ್ರತಿನಿಧಿಗಳು, ಬಿಜೆಪಿ ಪ್ರಮುಖರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದ್ದಾರೆ.

ಕಾರ್ಯಕರ್ತರು ಗದಗ ನಗರದಲ್ಲಿ ಬರುವ 133 ಬೂತ್‌ಗಳಲ್ಲಿ ಗಾಂವ ಚಲೋ ಅಭಿಯಾನದ ಸ್ವರೂಪ, ಪಕ್ಷದ ಆದೇಶದ ಕಾರ್ಯಗಳನ್ನು ಬೂತ್ ಅಧ್ಯಕ್ಷರು, ಸಮಿತಿ ಸದಸ್ಯರು, ಕಾರ್ಯಕರ್ತರು, ಜಿಲ್ಲಾಧ್ಯಕ್ಷರು, ಗದಗ ನಗರ ಅಧ್ಯಕ್ಷರು, ಪ್ರಧಾನ ಕಾರ್ಯದರ್ಶಿಗಳು, ಪದಾಧಿಕಾರಿಗಳು ಪಾಲ್ಗೊಂಡು ಅಭಿಯಾನವನ್ನು ಯಶಸ್ವಿಗೊಳಿಸುತ್ತಿದ್ದಾರೆ.

# ಜಾತ್ರೆಯೆಂದರೆ ಹಣ ಖರ್ಚು ಮಾಡುವುದಷ್ಟೇ ಅಲ್ಲ

■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ನಾಡಿನ ಮಠ-ಮಾನ್ಯಗಳು ಆಧ್ಯಾತ್ಮಿಕ ಜ್ಞಾನವನ್ನು ನೀಡುತ್ತಾ ಬಂದಿವೆ. ಈ ನಾಡಿನ ಶ್ರೇಷ್ಠ ಮಠಗಳಲ್ಲಿ ಒಂದಾದ ಅನ್ನದಾನೀಶ್ವರ ಮಠದ ಶ್ರೀ ಅನ್ನದಾನೀಶ್ವರ ಮಹಾಶಿವಯೋಗಿಗಳು ತ್ರಿಕಾಲ ಪೂಜಾ ನಿಷ್ಠರು, ಅನ್ನ-ಜ್ಞಾನದ ದಾಸೋಹಿಗಳಾಗಿದ್ದಾರೆ ಎಂದು ಹಡಗಲಿಯ ಶಿವಶಾಂತವೀರ ಶ್ರೀಗಳು ಅಭಿಪ್ರಾಯಪಟ್ಟರು.

ಪಟ್ಟಣದ ಶ್ರೀ ಮಠದಲ್ಲಿ ಜ.ಅನ್ನದಾನೀಶ್ವರ ಜಾತ್ರಾ ಮಹೋತ್ಸವದ ನಿಮಿತ್ತ ಹಮ್ಮಿಕೊಂಡಿರುವ ವೆಂಕಟಾಪೂರ ಅಜ್ಜನವರ ಪ್ರವಚನ ಕಾರ್ಯಕ್ರಮದಲ್ಲಿ ಮಾತನಾಡಿ, ಜಾತ್ರೆ ಎಂದರೆ ಕೇವಲ ಹಣ ಖರ್ಚು ಮಾಡುವದಲ್ಲ. ಜಾತ್ರೆ ಎಂದರೆ ಇಂತಹ ಪುಣ್ಯ ಪುರುಷರ ಜೀವನ ಚರಿತ್ರೆಯನ್ನು ಕೇಳುವ ಮೂಲಕ ಜ್ಞಾನವೆಂಬ ಜಾತ್ರೆಯನ್ನು ಪಡೆದುಕೊಳ್ಳಬೇಕು ಎಂದು ಹೇಳಿದರು.




ಭಳೂಟಗಿ ಶಿವಕುಮಾರ ಪ್ರವಚನ ನೀಡಿ, ಆಧ್ಯಾತ್ಮಿಕ ಚಿಂತನೆಯಿಂದ ಭೌತಿಕ ಸಂಪತ್ತು ಹೆಚ್ಚುತ್ತದೆ. ಇದಕ್ಕಾಗಿ ಪುರಾಣ-ಪ್ರವಚನ, ಪುಣ್ಯ ಪುರುಷರ ಆದರ್ಶಗಳನ್ನು ಕೇಳಬೇಕು. ಅಂದಾಗ ಜೀವನ ಪಾವನವಾಗುತ್ತದೆ ಎಂದು ಹೇಳಿದರು.

ನಾಡೋಜ ಡಾ. ಅನ್ನದಾನೀಶ್ವರ ಮಹಾಶಿವಯೋಗಿಗಳು, ಶ್ರೀಮಠದ ಉತ್ತರಾಧಿಕಾರಿಗಳಾದ ಶ್ರೀ ಮಲ್ಲಿಕಾರ್ಜುನ ಸ್ವಾಮೀಜಿ, ಚನ್ನಬಸವ ದೇವರು, ಶಿವಾನಂದ ದೇವರು ಪ್ರವನ ಕಾರ್ಯಕ್ರಮಕ್ಕೆ ದೀಪ ಬೆಳಗಿಸಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಜಾತ್ರಾ ಕಮಿಟಿ ಅಧ್ಯಕ್ಷ ನಾಗೇಶ ಹುಬ್ಬಳ್ಳಿ, ಕಾರ್ಯದರ್ಶಿ ಮಂಜುನಾಥ ಮುಧೋಳ, ಉಪಾಧ್ಯಕ್ಷ ಎ.ಎಮ್. ಶಿವಶೆಟ್ಟರ, ಖಜಾಂಚಿ ಅಜ್ಜಪ್ಪ ಲಿಂಬಿಕಾಯಿ, ಬಿ.ಜಿ. ಜವಳಿ, ದೇವೀಂದ್ರಪ್ಪ ರಾಮೇನಹಳ್ಳಿ, ಎಮ್.ಜಿ. ಗಚ್ಚಣ್ಣವರ, ಸಂತೋಷ ಹಿರೇಮಠ, ವೀರನಗೌಡ ಗುಡದಪ್ಪನವರ, ಎಮ್. ಎಸ್. ಶಿವಶೆಟ್ಟರ, ವೀರೇಶ ಸಜ್ಜನರ, ರವೀಂದ್ರಗೌಡ ಪಾಟೀಲ, ಶಕುಂತಲಾ ಹಂಪಿಮಠ, ಪುಷ್ಪಲತಾ ಹಿರೇಮಠ, ಸರೋಜಾ ಹಿರೇಮಠ, ಈರಮ್ಮ ಹಾಲಗಿ, ವಿಶ್ವನಾಥ ಉಳ್ಳಾಗಡ್ಡಿ, ಕುಮಾರ ಬನ್ನಿಕೊಪ್ಪ, ಹಾಲಯ್ಯ ಹಿರೇಮಠ ಮುಂತಾದವರಿದ್ದರು. ಎಸ್.ಎಸ್. ಇನಾಮತಿ ನಿರೂಪಿಸಿ ವಂದಿಸಿದರು.

# ಮತ್ತಿಹಳ್ಳಿಯಲ್ಲಿ ಸಂವಿಧಾನ ಜಾಗೃತಿ ಜಾಥಾಕ್ಕೆ ಸ್ವಾಗತ



■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಭಾರತ ಸಂವಿಧಾನ ಅಂಗೀಕಾರಗೊಂಡು 75ನೇ ವರ್ಷಾಚರಣೆ ಅಂಗವಾಗಿ ರಾಜ್ಯಾದಂತ ಸಂಚರಿಸುತ್ತಿರುವ ಸಂವಿಧಾನ ಜಾಗೃತಿ ಜಾಥಾ ರಥ ಮತ್ತಿಹಳ್ಳಿಗೆ ಆಗಮಿಸಿದ ಸಂದರ್ಭದಲ್ಲಿ ಮತ್ತಿಹಳ್ಳಿ ಗ್ರಾ.ಪಂ ಅಧ್ಯಕ್ಷ ಸಿ. ಸಣ್ಣ ಹೊನ್ನಪ್ಪ, ಎಎಸ್‌ಎಸ್‌ನ ತಾಲೂಕು ಸಂಘಟನಾ ಕಾರ್ಯದರ್ಶಿ ಮಂಜುನಾಥ, ಸಮಾಜ ಸೇವಕ ಕಿತ್ತೂರು ದಕ್ಷಿಣಮೂರ್ತಿ, ಡಾ. ಬಿ.ಆರ್. ಅಂಬೇಡ್ಕರ ಪುತ್ಥಳಿಗೆ ಪೂಜೆ ಸಲ್ಲಿಸಿ ಪುಷ್ಪಾರ್ಚನೆ ಮಾಡುವ ಮೂಲಕ ಸಂಭ್ರಮದ ಸ್ವಾಗತ ಕೋರಿದರು.

ತಾಲೂಕು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ರೇಣುಕಾ ದೇವಿ ಮಾತನಾಡಿ, ಬಾಬಾ ಸಾಹೇಬರು ಸಂವಿಧಾನದ ಕರಡು ಸಮಿತಿ ರಚನೆ ಮಾಡಿ ದೇಶದ ಶೋಷಿತ ಸಮಾಜಕ್ಕೆ, ಶ್ರಮಿಕ ವರ್ಗಕ್ಕೆ, ಕೂಲಿ ಕಾರ್ಮಿಕರಿಗೆ ಸಮಾಜದ ಪ್ರತಿಯೊಬ್ಬ ವ್ಯಕ್ತಿಗೂ ಸಮಾನ ಹಕ್ಕನ್ನು ನೀಡುವಲ್ಲಿ ಶ್ರಮಿಸಿದ್ದಾರೆ ಎಂದರು.

ನಂತರ ಗ್ರಾಮ ಪಂಚಾಯತ ಆವರಣದಲ್ಲಿ ಜರುಗಿದ ಸಮಾರಂಭದಲ್ಲಿ ಪಿಡಿಓ ಹಾಲಪ್ಪ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಿಕ್ಷಕರಾದ ಹನುಮಂತಪ್ಪ ಸಂವಿಧಾನದ ಬಗ್ಗೆ ಸಾರ್ವಜನಿಕರಿಗೆ ತಿಳಿಸಿದರು. ಕಾರ್ಯದರ್ಶಿ ಸಾಗರ, ಗ್ರಾ.ಪಂ ಉಪಾಧ್ಯಕ್ಷೆ ಸಣ್ಣಮನಿ ಕೊಟ್ರಮ್ಮ, ಸದಸ್ಯರಾದ ಶ್ರವಣ ಗೌಡ, ಹನುಮಂತಪ್ಪ, ಶಿವಣ್ಣ, ಮುಖಂಡರಾದ ಬೆಟ್ಟನಗೌಡ, ರಾಮಣ್ಣ, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು, ಗ್ರಾಮ ಆಡಳಿತಾಧಿಕಾರಿ ಕೊಟ್ರೇಶ, ಎಲ್ಲ ಶಾಲೆಗಳ ಮುಖ್ಯೋಪಾಧ್ಯಾಯರು ಮತ್ತು ಶಿಕ್ಷಕರು, ವಿವಿಧ ಇಲಾಖೆಗಳ ಅಧಿಕಾರಿಗಳು, ಅಂಗನವಾಡಿ, ಆಶಾ ಕಾರ್ಯಕರ್ತೆಯರು, ಶಾಲಾ ಮಕ್ಕಳು, ಗ್ರಾಮಸ್ಥರು ಉಪಸ್ಥಿತರಿದ್ದರು.

# ನರೇಂದ್ರ ಮೋದಿಯವರ ಕೈ ಬಲಪಡಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ದೇಶದ ಅಭಿವೃದ್ಧಿಯ ದೃಷ್ಟಿಯಿಂದ ನರೇಂದ್ರ ಮೋದಿಯವರು ಮತ್ತೊಮ್ಮೆ ಪ್ರಧಾನಿಯಾಗುವ ಅಗತ್ಯವಿದೆ ಎಂದು ಗದಗ-ಬೆಟಗೇರಿ ನಗರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಅನಿಲ್ ಅಬ್ಬಿಗೇರಿ ಹೇಳಿದರು.

ನಗರದ ತ್ರಿಕೂಟೇಶ್ವರ ದೇವಸ್ಥಾನದ ಹತ್ತಿರ ವಾರ್ಡ್ ನಂ-31, 32ರಲ್ಲಿ ಬಿಜೆಪಿ ಕಾರ್ಯಕರ್ತರು ವಿಕಸಿತ ಭಾರತ-ಸಂಕಲ್ಪ ಯಾತ್ರೆಯ ಗ್ರಾಮ ಚಲೋ ಅಭಿಯಾನದ ಅಂಗವಾಗಿ ಗೋಡೆ ಬರಹ, ಮೋದಿ ಗ್ಯಾರಂಟಿ ಕುರಿತು ಮನೆ ಮನೆಗೆ ಕರಪತ್ರ ವಿತರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ದೇಶವನ್ನು ಬಲಿಷ್ಠಗೊಳಿಸಿ ವಿಶ್ವಕ್ಕೆ ಮಾದರಿಯಾಗಲು ನರೇಂದ್ರ ಮೋದಿ ಅವರ ಕೈ ಬಲ ಪಡಿಸಲು ಈ ಬಾರಿ ಮೋದಿಯವರನ್ನು ಮತ್ತೊಮ್ಮೆ ಪ್ರಧಾನಿಯನ್ನಾಗಿ ಮಾಡಬೇಕಾಗಿದೆ ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ನಗರಸಭೆ ಉಪಾಧ್ಯಕ್ಷೆ ಸುನಂದಾ ಬಾಕಳೆ, ನಗರಸಭೆ ಸದಸ್ಯೆ ಶೈಲಾ ಬಾಕಳೆ, ವಾರ್ಡಿನ ಹಿರಿಯರಾದ ಪರಶುರಾಮ ಬದಿ, ಕೃಷ್ಣಾಸಾ ಲದ್ವಾ, ಲೋಕನಾಥಸಾ ಬದಿ, ಗದಗ-ಬೆಟಗೇರಿ ಬಿಜೆಪಿ ಶಹರ ಪ್ರಧಾನ ಕಾರ್ಯದರ್ಶಿ ಸುಧೀರ ಕಾಟಿಗರ, ಯುವ ಮುಖಂಡ ಶ್ರೀಕಾಂತ ಬಾಕಳೆ, ಪರಶುರಾಮ ಮಿಸ್ಕಿನ, ನಾಗರಾಜ ಖೋಡೆ, ಅಶ್ವಿನಿ ಜಗತಾಪ, ರವಿ ಚವ್ಹಾಣ, ಕೌಶಲ್ಯಬಾಯಿ ಬದಿ ಮುಂತಾದವರು ಉಪಸ್ಥಿತರಿದ್ದರು.

## ಪರೀಕ್ಷಾ ಕೇಂದ್ರಗಳ ಸುತ್ತಲೂ ನಿಷೇದಾಜ್ಞೆ ಜಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಅಭ್ಯರ್ಥಿಗಳ ಯು.ಪಿ.ಎಸ್.ಸಿ, ಕೆ.ಎ.ಎಸ್,ಬ್ಯಾಂಕಿಂಗ್, ಗ್ರೂಪ್ ಸಿ,ಎಸ್.ಎಸ್.ಸಿ. ಮತ್ತು ಆರ್. ಆರ್.ಬಿ ಹುದ್ದೆಗಳಿಗೆ ತರಬೇತಿ ನೀಡಲು ಅಭ್ಯರ್ಥಿಗಳ ಆಯ್ಕೆ ಪರೀಕ್ಷೆಯನ್ನು ಫೆಬ್ರವರಿ 18 ರಂದು ನಡೆಸಲಿದೆ.

ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು, ಶಾಂತಿ ಸುವ್ಯವಸ್ಥಿತೆ ಕಾಪಾಡುವ ಹಿತದೃಷ್ಟಿಯಿಂದ ಫೆಬ್ರವರಿ 18ರಂದು ಜಿಲ್ಲೆಯ 04 ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿ ಬೆ.10ಗಂಟೆಯಿಂದ ಸಂಜೆ 5ಗಂಟೆವರೆಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ.

ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು ಅಥವಾ ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ನಿರ್ಬಂಧಿಸಲಾಗಿದೆ.

ಈ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಝುರಾಕ್ಸ್ ಅಂಗಡಿ, ಬುಕ್ ಸ್ಟಾಲ್, ಫೋಟೋ ಕಾಪಿಯರ್‌ಗಳನ್ನು ಬಂದ ಮಾಡಲು ಆದೇಶಿಸಿದೆ. ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್ ಫೋನ್ ಮತ್ತು ಇತರೆ ಸಂಪರ್ಕ ಸಲಕರಣೆಗಳನ್ನು ತರುವುದು ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಮತ್ತು ಜಿಲ್ಲಾ ದಂಡಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭಗೀರಥ ಸಮುದಾಯ ಭವನ ಉದ್ಘಾಟನೆ




■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಲೋಕ ಕಲ್ಯಾಣಕ್ಕೆ ಗಂಗೆಯನ್ನು ಧರೆಗೆ ತರಲು ಶ್ರಮವಹಿಸಿ ಯಶಸ್ಸು ಪಡೆದ ಮಹರ್ಷಿ ಭಗೀರಥ ಮಹಾತ್ಮರಾಗಿದ್ದಾರೆ ಎಂದು ನಿವೃತ್ತ ಪ್ರಧಾನ ಇಂಜಿನಿಯರ್ ಪ್ರಭಾಕರ ಚಿಣಿ ಹೇಳಿದರು.

ಸಮೀಪದ ಮುಶಿಗೇರಿ ಗ್ರಾಮದಲ್ಲಿ ಬುಧವಾರ ನಡೆದ ಭಗೀರಥ ಸಮುದಾಯ ಭವನದ ಉದ್ಘಾಟನೆ ಹಾಗೂ ಭಗೀರಥ ಜಯಂತಿ ಉದ್ಘಾಟಿಸಿ ಅವರು ಮಾತನಾಡಿದರು.

ಎಲ್ಲಾ ಸಮುದಾಯಗಳ ಮಹಾಪುರುಷರನ್ನು ನೆನೆಯುತ್ತಾ ಅವರ ತತ್ವ ಆದರ್ಶಗಳನ್ನು ಪಾಲನೆ ಮಾಡಿ, ಸ್ವಸ್ಥ ಸಮಾಜವನ್ನು ನಿರ್ಮಾಣ ಮಾಡುವ ಉದ್ದೇಶದಿಂದ ಮಹಾಪುರುಷರ ಜಯಂತಿಗಳನ್ನು ಆಚರಿಸುತ್ತಾ ಬರಲಾಗುತ್ತಿದೆ ಎಂದರು.

ಸಾನ್ನಿಧ್ಯ ವಹಿಸಿ ಮಾತನಾಡಿದ ಬಸವಕಲ್ಯಾಣ ಅನುಭವ ಮಂಟಪದ ಸಂಚಾಲಕರಾದ ಶಿವಾನಂದ ಸ್ವಾಮಿಗಳು, ಮಕ್ಕಳನ್ನು ಮೊಬೈಲ್ ಮತ್ತು ದೂರದರ್ಶನದಿಂದ ದೂರವಿಡಬೇಕು. ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವುದರೊಂದಿಗೆ ಸಮಾಜದಲ್ಲಿ ಒಳ್ಳೆಯ ಜೀವನ ಕಟ್ಟಿಕೊಕೊಳ್ಳಲು ಶ್ರಮಿಸಬೇಕು ಎಂದು ಪಾಲಕರಿಗೆ ಕಿವಿ ಮಾತು ಹೇಳಿದರು.

ಶಶಿಧರ ಕೊಡಕೇರಿ, ಚಂದ್ರಕಲಾ ಚಿಣಿ, ನಾಗಪ್ಪ ತೆವರನ್ನವರ, ಯಲ್ಲಪ್ಪ ಗದ್ದಿ, ವಿ.ಆರ್. ಚವ್ಹಾಣ, ಎಫ್.ಡಿ. ಉಪ್ಪಾರ, ಶಿವಪ್ಪ ಚಿಣಿ, ಮಲ್ಲಪ್ಪ ಗುಡೂರ, ಮಹೇಶ ಚಿಣಿ, ಸಂಗಪ್ಪ ವಾಜ್ಮಿ, ಬಸವರಾಜ ಕೊಡಕೇರಿ, ಬಸವರಾಜ ಜಕ್ಕಲಿ ಉಪಸ್ಥಿತರಿದ್ದರು.

## ಗುರು-ಶಿಷ್ಯ ಪರಂಪರೆಗೆ ಮಾದರಿ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಗುರು-ಶಿಷ್ಯ ಪರಂಪರೆಯ ಪಾವಿತ್ರ್ಯತೆಯನ್ನು ಸಾಕ್ಷೀಕರಿಸಿದ ಸಭಾಪತಿ ಬಸವರಾಜ ಹೊರಟ್ಟಿ ತಮ್ಮ 5 ದಶಕಗಳ ಸವಿ ನೆನಪನ್ನು ತಮಗೆ ಕಲಿಸಿದ ಗುರುಮಾತೆಯ ಹಾಗೂ ಸಹಪಾಠಿಗಳ ಜೊತೆಗೆ ಹಂಚಿಕೊಂಡಿದ್ದು ಪ್ರಸ್ತುತ ವಿದ್ಯಾರ್ಥಿ ಸಮುದಾಯಕ್ಕೆ ಮಾದರಿಯಾಗಿದೆ.

1972-73ರಲ್ಲಿ ದೈಹಿಕ ಶಿಕ್ಷಣದ ಸ್ನಾತಕ ಪದವಿ ಅಧ್ಯಯನ ಹಾಗೂ ಸ್ನಾತಕೋತ್ತರ ಪದವಿಗಾಗಿ (ಬಿ.ಪಿ.ಇಡಿ) ಅಧ್ಯಯನ ಮಾಡುತ್ತಿದ್ದ ಸಂದರ್ಭದಲ್ಲಿ ಸೂಕ್ತ ಮಾರ್ಗದರ್ಶನ ಹಾಗೂ ಅತ್ಯುತ್ತಮ ಶಿಕ್ಷಣ ನೀಡಿದ್ದ ಪ್ರೊ. ಶಕುಂತಲಾ ಅವರನ್ನು 50 ವರ್ಷಗಳ ಬಳಿಕ ಭೇಟಿ ಮಾಡಿದ ಬಸವರಾಜ ಹೊರಟ್ಟಿ, ನೆಚ್ಚಿನ ಗುರುಗಳ ಆಶೀರ್ವಾದ ಪಡೆದರು.

ಈ ಅಪರೂಪದ ಸಂದರ್ಭದಲ್ಲಿ ಅಧ್ಯಯನ ಕಾಲದ ಸಹಪಾಠಿ ಗಿರಿಜಾ, ಶಂಕರ ಹಾಗೂ ಆರ್.ಎ. ದೇಸಾಯಿ ಮುಂತಾದವರು ಉಪಸ್ಥಿತರಿದ್ದರು.

### ಬೀಚಿ ಬಳಗದ ದಶಮಾನೋತ್ಸವ ಯಶಸ್ಸಿಗೆ ಸಹಕರಿಸಿದವರಿಗೆ ಧನ್ಯವಾದ ಸಮರ್ಪಣಾ ಸಭೆ

## ಬೀಚಿ ಬಳಗ ಜನಮಾನಸದಲ್ಲಿ ಸ್ಥಿರವಾಗಿದೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕಳೆದ ಡಿಸೆಂಬರ್ ತಿಂಗಳಿನಲ್ಲಿ ನರೇಗಲ್ಲದಲ್ಲಿ ನಡೆದ ಬೀಚಿ ಬಳಗದ ದಶಮಾನೋತ್ಸವ ಕಾರ್ಯಕ್ರಮಕ್ಕೆ ಸಹಕರಿಸಿದ ಎಲ್ಲರಿಗೂ ಧನ್ಯವಾದಗಳು ಎಂದು ನರೇಗಲ್ಲ ಬೀಚಿ ಬಳಗದ ಅಧ್ಯಕ್ಷ ಕೆ.ಎಸ್. ಕಳಕಣ್ಣವರ ಹೇಳಿದರು.

ಇಲ್ಲಿನ ಹಿರೇಮಠದ ಸಭಾ ಭವನದಲ್ಲಿ ನಡೆದ ಬೀಚಿ ಬಳಗದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರಾಜ್ಯದಲ್ಲಿ ಎಲ್ಲಿಯೂ ಇಲ್ಲದ ಬೀಚಿ ಬಳಗವು ತನ್ನ ಸಾಹಿತ್ತಿಕ ಕಾರ್ಯಗಳ ಮೂಲಕ ಜನಮಾನಸದಲ್ಲಿ ಸ್ಥಿರಗೊಂಡಿದೆ. ಬಳಗದ ಕಾರ್ಯಕ್ರಮಗಳನ್ನು ಕಂಡು ನರೇಗಲ್ಲ ಮತ್ತು ಸುತ್ತಲಿನ ಗ್ರಾಮಗಳ ಸಾಹಿತ್ಯಾಸಕ್ತರು ಬಳಗದ ವತಿಯಿಂದ ಸದಸ್ಯತ್ವ ಅಭಿಯಾನವನ್ನು ನಡೆಸಿದಾಗ ಅದಕ್ಕೆ ಪೂರಕವಾಗಿ ಸ್ಪಂದಿಸಿ ಸಹಕರಿಸಿದ್ದು, ಅವರೆಲ್ಲರಿಗೂ ಬಳಗದ ಸರ್ವ ಪದಾಧಿಕಾರಿಗಳು ಮತ್ತು ಸದಸ್ಯರ ಪರವಾಗಿ ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸುವುದಾಗಿ ಕಳಕಣ್ಣವರ ಹೇಳಿದರು.

ಈ ನಮ್ಮ ಅನುಬಂಧ ಸದಾ ಹೀಗೇ ಮುಂದುವರೆಯಲಿ. ದಶಮಾನೋತ್ಸವದ ನಿಮಿತ್ಯ ಹರಟೆ ಸಾಮ್ರಾಟ್ ಖ್ಯಾತಿಯ ಹಿರೇಮಗಳೂರು ಕಣ್ಣನ್ ಅವರೂ ನರೇಗಲ್ಲಿಗೆ ಬಂದದ್ದು ನಮಗೆ ಹೆಚ್ಚಿನ ಶಕ್ತಿಯನ್ನು ತುಂಬಿದೆ. ನಮ್ಮ ಬಳಗದ



ಗೌರವಾಧ್ಯಕ್ಷರಾದ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ಮತ್ತು ನೇತೃತ್ವವನ್ನು ವಹಿಸಿಕೊಂಡ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ಕಾಲಕಾಲಕ್ಕೆ ಸೂಕ್ತ ಸಲಹೆ-ಸೂಚನೆ, ಮಾರ್ಗದರ್ಶನ ನೀಡಿ ನಮ್ಮ ಬಳಗದ ದಶಮಾನೋತ್ಸವ ಸಂಭ್ರಮದಿಂದ ಜರುಗಲು ಕಾರಣರಾಗಿದ್ದಾರೆ. ಅವರಿಗೂ ಸಹ ಬಳಗದ ಸರ್ವ ಸದಸ್ಯರ ಪರವಾಗಿ ಭಕ್ತಿಪೂರ್ವಕ ಪ್ರಣಾಮಗಳು ಎಂದು ಕಳಕಣ್ಣವರ ಹೇಳಿದರು.

ಸಭೆಯಲ್ಲಿ ಶ್ರೀ ಮಲ್ಲಿಕಾರ್ಜುನ ಶ್ರೀಗಳವರನ್ನು ಗೌರವಿಸಿ, ಕಾಣಿಕೆ ಸಮರ್ಪಿಸಲಾಯಿತು.

ಬಳಗದ ಕೋಶಾಧ್ಯಕ್ಷ ಶಿವಯೋಗಿ ಜಕ್ಕಲಿ ಲೆಕ್ಕ ಪತ್ರವನ್ನು ಮಂಡಿಸಿದರು. ಎಲ್ಲವನ್ನೂ ಪರೀಕ್ಷಿಸಿದ ಸಭೆ ತನ್ನ ಅನುಮೋದನೆಯನ್ನು ನೀಡಿತು. ಸಭೆಯಲ್ಲಿ ಸಂಚಾಲಕ ಈಶ್ವರ ಬೆಟಗೇರಿ, ನ್ಯಾಯವಾದಿ ರಾಜಶೇಖರಗೌಡ ಪಾಟೀಲ, ನಿಕಟಪೂರ್ವ ಅಧ್ಯಕ್ಷ ಸುರೇಶ ಹಳ್ಳಿಕೇರಿ, ನಿವೃತ್ತ ಪ್ರಾಚಾರ್ಯ ದೊಡ್ಡಯ್ಯ ಅರವಟಗಿಮಠ, ನಿವೃತ್ತ ಶಿಕ್ಷಕ ಎಂ.ಎಸ್. ದಢೇಸೂರಮಠ, ಜಿ.ಎ. ಬೆಲ್ಲದ, ಪತ್ರಕರ್ತ ಆದರ್ಶ ಕುಲಕರ್ಣಿ, ಡಾ. ಆರ್.ಕೆ. ಗಚ್ಚಿನಮಠ, ಸಂಘಟನಾ ಕಾರ್ಯದರ್ಶಿ ಸಿ.ಕೆ. ಕೇಸರಿ, ಮುಖ್ಯ ಶಿಕ್ಷಕಿ ಭಾರತಿ ಶಿರ್ಸಿ,

ಉಪಾಧ್ಯಕ್ಷ ಆರ್.ಎಸ್. ನರೇಗಲ್ಲ, ಶಿಕ್ಷಕ ಎಂ.ಕೆ. ಬೇವಿನಕಟ್ಟಿ, ಮುಖ್ಯ ಶಿಕ್ಷಕ ಬಿ.ಬಿ. ಕುರಿ, ನಿವೃತ್ತ ಮುಖ್ಯ ಶಿಕ್ಷಕ ಅರುಣ ಬಿ.ಕುಲಕರ್ಣಿ ಸೇರಿದಂತೆ ಇನ್ನೂ ಅನೇಕರು ಪಾಲ್ಗೊಂಡಿದ್ದರು. ಶಿಕ್ಷಕರಾದ ಎಚ್.ವ್ಹಿ. ಈಟಿ ಸ್ವಾಗತಿಸಿದರೆ, ಜೆ.ಎ. ಪಾಟೀಲ ನಿರೂಪಿಸಿ, ವಂದಿಸಿದರು.

ಸಾನ್ನಿಧ್ಯ ವಹಿಸಿದ್ದ ಹಿರೇಮಠದ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ಆಶೀರ್ವಚನ ನೀಡಿ, ಕಳೆದ 10 ವರ್ಷಗಳಿಂದ ಇಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬೀಚಿ ಬಳಗವು ಪಟ್ಟಣದಲ್ಲಿ ಸಾಹಿತ್ತಿಕ ವಾತಾವರಣವನ್ನು ಮೂಡಿಸುವಲ್ಲಿ ಸಫಲವಾಗಿದೆ. ಇಂತಹ ಕಾರ್ಯ ನೆರವೇರಿಸಿದ್ದಕ್ಕೆ ಬೀಚಿ ಬಳಗದ ಅಧ್ಯಕ್ಷರನ್ನು, ಪದಾಧಿಕಾರಿಗಳನ್ನು ಮತ್ತು ಸರ್ವ ಸದಸ್ಯರನ್ನು ಶ್ರೀ ಮಳೆ ಮಲ್ಲೇಶ್ವರನು ಸದಾಕಾಲ ಆಶೀರ್ವದಿಸಲಿ ಮತ್ತು ಇಂತಹ ಸಾಹಿತ್ತಿಕ ಕಾರ್ಯಗಳು ಸದಾ ಜರುಗುವಂತಾಗಲಿ ಎಂದರು.



ಗದಗ ತಾಲೂಕಿನ ಸುಕ್ಷೇತ್ರ ಬಳಗಾನೂರಿನ ಚಿಕೇನಕೊಪ್ಪದ ಚನ್ನವೀರಶರಣರ 29ನೇ ಪುಣ್ಯಸ್ಮರಣೋತ್ಸವ ಹಾಗೂ ಜಾತ್ರಾ ಮಹೋತ್ಸವದ ಅಂಗವಾಗಿ ಷಟ್‌ಸ್ಥಲ ಧ್ವಜಾರೋಹಣವನ್ನು ಇಟ್ಟಿಗೆಯ ಮೇಲುಗದ್ದುಗೆಯ ಹಿರೇಮಠದ ಷ.ಬ್ರ. ಶ್ರೀ ಗುರುಶಾಂತೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ನೆರವೇರಿಸಿದರು. ಈ ಸಂದರ್ಭದಲ್ಲಿ ಸದ್ಭಕ್ತರು ಉಪಸ್ಥಿತರಿದ್ದರು.

## ಭಾರತ ಅಭಿವೃದ್ಧಿಯತ್ತ ಸಾಗುವಂತೆ ಕೆಲಸ ಮಾಡೋಣ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಹಾಗೂ ಬಿಜೆಪಿ ಪಕ್ಷ ಸಂಘಟನೆ ಮಾಡಲು ರಾಜ್ಯ ಹಿಂದುಳಿದ ವರ್ಗಗಳ ಮೋರ್ಚಾದ ರಾಜ್ಯ ಕಾರ್ಯಕಾರಣಿ ಸದಸ್ಯರನ್ನಾಗಿ ಮಂಜುನಾಥ ಮಡಿವಾಳರರನ್ನು ಆಯ್ಕೆ ಮಾಡಲಾಗಿದೆ.

ಬಿಜೆಪಿ ಪಕ್ಷದ ಕಚೇರಿಯಲ್ಲಿ ಹಿಂದುಳಿದ ವರ್ಗಗಳ ಮೋರ್ಚಾದ ರಾಜ್ಯಾಧ್ಯಕ್ಷ ರಘು ಕೌಟಿಲ್ಯ ಅವರಿಂದ ನೇಮಕಾತಿ ಪತ್ರ ಸ್ವೀಕರಿಸಿ ಮಂಜುನಾಥ ಮಡಿವಾಳರ ಧನ್ಯವಾದಗಳನ್ನು ತಿಳಿಸಿದರು.



ಬಿಜೆಪಿ ಪಕ್ಷದ ನಿಷ್ಠಾವಂತ ಕಾರ್ಯಕರ್ತರನ್ನು ಗುರುತಿಸಿ ಜವಾಬ್ದಾರಿ ನೀಡುತ್ತಿರುವುದು ಪಕ್ಷದ ಬಲವರ್ಧನೆಯ ಸಂಕೇತವಾಗಿದೆ. ಹಿಂದುಳಿದ ವರ್ಗದ ಜನರಿಗೆ ಕೇಂದ್ರದ ಬಿಜೆಪಿ ಸರ್ಕಾರ ಹೆಚ್ಚು ಮಹತ್ವ ನೀಡಿ, ಹೆಚ್ಚು ಸ್ಥಾನಮಾನ ನೀಡುತ್ತಿದೆ. ಪಕ್ಷ ಸಂಘಟನೆ ಹಾಗೂ ಕೇಂದ್ರ ಸರ್ಕಾರದ ಸಾಧನೆಗಳನ್ನು ಮನೆ ಮನೆಗೆ ತಿಳಿಸುವ ಮೂಲಕ ಮತ್ತೊಮ್ಮೆ ನರೇಂದ್ರ ಮೋದಿಯವರನ್ನೇ ಪ್ರಧಾನ ಮಂತ್ರಿಗಳನ್ನಾಗಿ ಆಯ್ಕೆ ಮಾಡಿ ಭಾರತ ಅಭಿವೃದ್ಧಿಯತ್ತ ನಡೆಯುವಂತೆ ನಾವೆಲ್ಲರೂ ಕೆಲಸ ಮಾಡೋಣ ಎಂದರು.

ಈ ಸಂದರ್ಭದಲ್ಲಿ ಮಾಜಿ ಸಚಿವ, ಬಿಜೆಪಿ ರಾಜ್ಯ ಉಪಾಧ್ಯಕ್ಷ ಹರತಾಳ ಹಾಲಪ್ಪ, ಎಂ.ಪಿ. ರೇಣುಕಾಚಾರ್ಯ, ಹಿಂದುಳಿದ ವರ್ಗಗಳ ಪ್ರಧಾನ ಕಾರ್ಯದರ್ಶಿ ಸೋಮಶೇಖರ, ಉಪಾಧ್ಯಕ್ಷ ವಿವೇಕಾನಂದ ಡಬ್ಬಿ, ಗೋವಿಂದರಾಜು ಹಾಗೂ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಸಿದ್ಧೇಶ್ವರ ಶಾಸ್ತ್ರೀ ತೆಲ್ಲೂರರಿಗೆ ಸನ್ಮಾನ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರಕಾರದಿಂದ ಕುಮಾರವ್ಯಾಸ ಪ್ರಶಸ್ತಿ ಪುರಸ್ಕೃತರಾದ ನಾಡಿನ ಹಿರಿಯ ಸಂಗೀತ ಕಲಾವಿದ, ಕಥಾಕೀರ್ತನಕಾರ, ಗದುಗಿನ ಸಿದ್ಧೇಶ್ವರ ಶಾಸ್ತ್ರಿಗಳು ತೆಲ್ಲೂರ ಅವರನ್ನು ನರಗುಂದ ತಾಲೂಕಿನ ಭೈರನಹಟ್ಟಿಯ ದೊರೆಸ್ವಾಮಿ ವಿರಕ್ತಮಠದಲ್ಲಿ ಸನ್ಮಾನಿಸಿ ಗೌರವಿಸಲಾಯಿತು.

ದಲಿತ ಸಾಹಿತ್ಯ ಪರಿಷತ್ತು ರಾಜ್ಯ ಘಟಕ, ಗದಗ ಜಿಲ್ಲಾ ಘಟಕ, ದಲಿತ ವಿಮೋಚನಾ



ಕೇಂದ್ರ, ಶ್ರೀ ತೋಂಟದಾರ್ಯ ಸಂಸ್ಥಾನ ಮಠ ಗದಗ, ಕನ್ನಡ ಸಾಹಿತ್ಯ ಮತ್ತು ಸಾಂಸ್ಕೃತಿಕ ವೇದಿಕೆ ದೊರೆಸ್ವಾಮಿ ವಿರಕ್ತಮಠ ಸಂಯುಕ್ತ ಆಶ್ರಯದಲ್ಲಿ ನಡೆದ ಸಾವಿತ್ರಿಬಾಯಿ ಫುಲೆ ಉತ್ಸವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದ ದೊರೆಸ್ವಾಮಿಮಠ ಹಾಗೂ ಶಿರೋಳ ತೋಂಟ-ದಾರ್ಯ ಮಠದ ಪೂಜ್ಯ ಶಾಂತಲಿಂಗ ಮಹಾಸ್ವಾಮಿಗಳು ಸನ್ಮಾನಿಸಿದರು.

ಸಮಾರಂಭದ ಅಧ್ಯಕ್ಷತೆಯನ್ನು ದ.ಸಾ.ಪ ರಾಜ್ಯ ಘಟಕದ ಅಧ್ಯಕ್ಷ ಡಾ.ಅರ್ಜುನ ಗೊಳಸಂಗಿ, ಹಿರಿಯ ಸಾಹಿತಿ ಸಾವಿತ್ರಿ ಮುಜುಮದಾರ, ಡಾ. ವೈ.ಎಂ. ಭಜಂತ್ರಿ, ಡಾ. ಎಚ್.ಬಿ. ಕೋಲ್ಕಾರ ಸೇರಿದಂತೆ ಅನೇಕ ಗಣ್ಯರು ಸಮಾರಭದಲ್ಲಿದ್ದರು.

## ಸಂತ ಸೇವಾಲಾಲರ ಜಯಂತಿ ಆಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಹೃದಯ ಭಾಗದಲ್ಲಿರುವ ಸುಭಾಸ ಲಕ್ಷ್ಮಣ ಲಮಾಣಿ ಮಾಲೀಕತ್ವದ ಶ್ರೀನಿವಾಸ ಟ್ರೇಡಿಂಗ್ ಕಂಪನಿ ಸರ್ಜಿಕಲ್ ಅಂಗಡಿಯಲ್ಲಿ ಶ್ರೀ ಸಂತಸೇವಾಲಾಲ ಮಹಾರಾಜರ 285ನೇ ಜಯಂತ್ಯುತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಯುವ ಕಾಂಗ್ರೆಸ್ ಮುಖಂಡರಾದ ಕೃಷ್ಣಗೌಡ ಪಾಟೀಲ ಸಂತ ಸೇವಾಲಾಲ ಮಹಾರಾಜರ ಭಾವಚಿತ್ರಕ್ಕೆ ಪುಷ್ಪಾರ್ಪಣೆಗೈದು ಮಾತನಾಡಿ, ಬಂಜಾರ ಸಮುದಾಯದ ಶ್ರೀನಿವಾಸ ಟ್ರೇಡಿಂಗ್ ಕಂಪನಿ ಸರ್ಜಿಕಲ್



ಅಂಗಡಿಯಲ್ಲಿ ಮಹಾರಾಜರ ಜಯಂತಿ ಆಚರಿಸುತ್ತಿರುವುದು ಹೆಮ್ಮೆಯ ವಿಷಯ. ನಗರದಲ್ಲಿ ವಿಕಲಚೇತನರಿಗೆ, ಅಂಗವಿಕಲರಿಗೆ, ವಯೋವೃದ್ಧರಿಗೆ, ಇತರೆ ವೈದ್ಯಕೀಯ ಉಪಕರಣಗಳನ್ನು ಯೋಗ್ಯ ದರದಲ್ಲಿ ಪೂರೈಸುತ್ತಿರುವ ಹಿಂದುಳಿದ ಸಮಾಜದ ಸುಭಾಸ ಲಮಾಣಿಯವರು ಕಾರ್ಯ ಶ್ಲಾಘನೀಯ ಎಂದರು.

ಇದೇ ಸಂದರ್ಭದಲ್ಲಿ ಕೃಷ್ಣಗೌಡ ಪಾಟೀಲರನ್ನು ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಕಾಂಗ್ರೆಸ್ ಹಿರಿಯ ಮುಖಂಡರಾದ ಪ್ರಭು ಬುರಬುರೆ, ಖ್ಯಾತ ಲೆಕ್ಕ ಪರಿಶೋಧಕ ಮುಕುಂದ ಪೋತ್ನಿಸ್, ಖ್ಯಾತ ವೈದ್ಯರಾದ ಡಾ. ವೆಂಕಟೇಶ ರಾಠೋಡ, ಕಾಂಗ್ರೆಸ್ ಅಲ್ಪಸಂಖ್ಯಾತರ ಘಟಕದ ಮುಖಂಡ ಮಹಮ್ಮದ ಶಾಲಗಾರ, ವಿಠ್ಠಲ ಲಮಾಣಿ, ಕನ್ನಡಾಭಿಮಾನಿ ಮಲ್ಲಿಕಾರ್ಜುನ ಖಂಡಮ್ಮನವರ, ಮುಖಂಡರಾದ ಶಿವರಾಜ ಕೋಟಿ ಸೇರಿದಂತೆ ಸಮಾಜದ ಗಣ್ಯರು ಉಪಸ್ಥಿತರಿದ್ದರು.


### ಕನಕಾಪುರ ದ್ಯಾಮವ್ವ ದೇವಿಯ ಜಾತ್ರಾ ಮಹೋತ್ಸವ

## ಇಷ್ಟಾರ್ಥ ಈಡೇರಿಸುವ ದ್ಯಾಮವ್ವದೇವಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪ್ರತಿಯೊಂದು ಊರಿನಲ್ಲಿಯೂ ಗ್ರಾಮದೇವತೆಯಾಗಿ ದ್ಯಾಮವ್ವದೇವಿ ದೇವಸ್ಥಾನಗಳನ್ನು ಕಾಣಬಹುದಾಗಿದ್ದು, ಪ್ರತಿಯೊಂದು ಗ್ರಾಮದೇವತೆ ಊರಿನ ಅಧಿದೇವತೆಯಾಗಿರುತ್ತಾಳೆ. ದೇವಿಯು ಗ್ರಾಮವನ್ನು ಕಾಯುವುದರೊಂದಿಗೆ ಭಕ್ತರ ಇಷ್ಟಾರ್ಥಗಳನ್ನು ಈಡೇರಿಸುತ್ತಾಳೆ ಎನ್ನುವ ನಂಬಿಕೆ ಬಹುತೇಕ ಗ್ರಾಮಗಳಲ್ಲಿದೆ. ಇಂತಹ ಇಷ್ಟಾರ್ಥಗಳನ್ನು ಈಡೇರಿಸುವ ಹಾಗೂ ನೂರಾರು ವರ್ಷಗಳ ಭವ್ಯ ಇತಿಹಾಸವನ್ನು ಹೊಂದಿರುವ, ಪಟ್ಟಣದಿಂದ ಶಿಗ್ಲಿ ಗ್ರಾಮಕ್ಕೆ ತೆರಳುವ ಮಾರ್ಗ ಮಧ್ಯದಲ್ಲಿ ನೆಲೆನಿಂತಿರುವ ಕನಕಾಪುರ ದ್ಯಾಮವ್ವ ದೇವಿಯ ಇತಿಹಾಸವೇ ವಿಶಿಷ್ಟವಾಗಿದೆ.

ಕನಕಾಪುರ ಹೆಸರಿಗೆ ತಕ್ಕ ಹಾಗೆ ಧನಕನಗಳಿಗೆ ಪ್ರಸಿದ್ಧವಾದ ಊರಾಗಿತ್ತು. ಇಲ್ಲಿ ಬಂಗಾರ, ಮುತ್ತು-ರತ್ನಗಳ ವ್ಯಾಪಾರವು ಭರಾಟೆಯಿಂದ ನಡೆಯುತ್ತಿತ್ತು. 30 ಎಕರೆಯಷ್ಟು ವಿಸ್ತಾರವಾದ ಪ್ರದೇಶದಲ್ಲಿ ಊರು ವ್ಯಾಪಿಸಿತ್ತು. ಸುತ್ತಲೂ ಸುಂದರವಾದ ದೇವಾಲಯಗಳು ಎತ್ತರವಾದ ಮುಡೆ, ಬಾವಿಗಳು ಇದ್ದವು. ಸ್ವಾತಂತ್ರ ಪೂರ್ವದಲ್ಲಿ ಈ ಭಾಗ ಸಂಸ್ಥಾನಿಕರ ಆಡಳಿತಕ್ಕೆ ಒಳಪಟ್ಟಿದ್ದವು. ಹಳ್ಳಿ ನೇರ ಬ್ರಿಟಿಷರ ಆಡಳಿತದಲ್ಲಿತ್ತು. 1850ರಿಂದ 1900ರ ಮಧ್ಯಕಾಲದಲ್ಲಿ ಕನಕಾಪುರ ಗ್ರಾಮಕ್ಕೆ



ಸಾಂಕ್ರಾಮಿಕ ರೋಗಗಳು ಮತ್ತು ಕಳ್ಳಕಾಕರ ಪೀಡೆ ಕಾಡತೊಡಗಿತು. ಇವೆರಡು ಕಾರಣಗಳಿಂದ ಊರು ಸಂಪೂರ್ಣ ಬರಿದಾಯಿತು. ಇದೇ ಕಾಲಾವಧಿಯಲ್ಲಿ ಸಮೀಪ ಇದ್ದ ಇನ್ನೂ ಎರಡು ಹಳ್ಳಿಗಳಾದ ಕಾನಕೊಪ್ಪ ಮತ್ತು ಉಪನಾಳ ಹಳ್ಳಿಗಳೂ ಖಾಲಿಯಾದವು.

ಕನಕಾಪೂರ ಅಷ್ಟೈಶ್ವರ್ಯ ತುಂಬಿಕೊಂಡಿದ್ದ ನಾಡಾಗಿತ್ತು. ಕಾಲಾಂತರದಲ್ಲಿ ಇಲ್ಲಿ ಯಾರೂ ನೆಲೆ ನಿಲ್ಲದಿರುವದರಿಂದ ಗ್ರಾಮ ಸಂಪೂರ್ಣ ಪಾಳುಬಿದ್ದಿತ್ತು. ಇದು ಇನ್ನೂ ಕಂದಾಯ ಗ್ರಾಮವಾಗದೆ ದಾಖಲೆಗಳಲ್ಲಿ ಉಳಿದಿವೆ. ಇದಕ್ಕೆ ಕಾಲಾವಧಿಯಲ್ಲಿ ಕುರುಹುಗಳಿವೆ. ದೇವಸ್ಥಾನ, ಬಂಗಾರ, ಮುತ್ತು-ರತ್ನಗಳನ್ನು ಮಾರುತ್ತಿದ್ದ ಗ್ರಾಮ ಹಾಳು ಬೀಳುವಂತಾಯಿತು. ಇದಕ್ಕೆ ಹಿನ್ನೆಲೆಯಾಗಿ ಹಲವಾರು ಕಥೆಗಳು ಕೇಳಿ ಬರುತ್ತವೆ. ಇಷ್ಟೆಲ್ಲ ಗ್ರಾಮ ನಾಶವಾದರೂ ಸಹ ಈ ದ್ಯಾಮವ್ವ ದೇವಿ ಅಲ್ಲಿಯೇ ನೆಲೆನಿಂತಿರುವದು ವಿಶೇಷ ಎನ್ನಬಹುದು.

ಇಂತಹ ಶಕ್ತಿ ದೇವತೆ ಕನಕಾಪೂರ ದ್ಯಾಮವ್ವ ದೇವಿ ದೇವಸ್ಥಾನದ ಜಾತ್ರಾ ಮಹೋತ್ಸವ ಹಲವಾರು ಕಾರಗಳಿಂದ ನಿಂತು ಹೋಗಿತ್ತು. ಕಳೆದ 5 ವರ್ಷಗಳಿಂದ ಭಕ್ತರ ಅಭೀಷ್ಟೆಯ ಮೇರೆಗೆ ಜಾತ್ರೆ ಪ್ರಾರಂಭವಾಗಿದ್ದು, ಈ ವರ್ಷ 5ನೇ ಜಾತ್ರಾ ಮಹೋತ್ಸವ, ಕಡುಬಿನ ಕಾಳಗ ಫೆ. 16 ಮತ್ತು 17ರಂದು ಅದ್ದೂರಿಯಾಗಿ ನಡೆಯಲಿದೆ.

ಈ ದ್ಯಾಮವ್ವದೇವಿಗೆ ಶಿಗ್ಲಿ, ಲಕ್ಷೇಶ್ವರ, ಮಲ್ಲಾಪುರ ಸೇರಿದಂತೆ ದೂರದೂರದ ಊರುಗಳಿಂದ ಸಾವಿರಾರು ಭಕ್ತರಿದ್ದು, ಮಹಾನವಮಿ, ದೀಪಾವಳಿ, ಯುಗಾದಿ, ಪಟ್ಟಗಳಲ್ಲಿ ವಿಶೇಷ ಪೂಜೆಗಳು ಜರುಗುತ್ತದೆ. ದೇವಸ್ಥಾನವು ಹಂತ ಹಂತವಾಗಿ ಜೀರ್ಣೋದ್ಧಾರಗೊಳ್ಳುತ್ತಾ ಬಂದಿದೆ. ಈ ಮೂರು ಊರುಗಳ ಜನರು ಪಕ್ಕದ ಊರುಗಳಿಗೆ ವಲಸೆ ಹೋಗಿದ್ದರೆ, ತಮ್ಮ ಹಿರಿಯರ ನೆಲೆಗಳೊಂದಿಗೆ ಇಂದಿನ ಪೀಳಿಗೆಯವರು ಭಾವನಾತ್ಮಕ ಸಂಬಂಧ ಹೊಂದಿದ್ದಾರೆ. ಪ್ರತಿವರ್ಷ ಶ್ರಾವಣ ಮಾಸದಲ್ಲಿ ಅಲ್ಲಿ ಶ್ರೀದೇವಿಯ ದೇವಾಲಯಯಕ್ಕೆ ಪೂಜೆ ಸಲ್ಲಿಸಲು ಬರುತ್ತಾರೆ.




■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಪಟ್ಟಣದ ತಹಸೀಲ್ದಾರ ಕಾರ್ಯಾಲಯದ ಸಭಾ ಭವನದಲ್ಲಿ ಗುರುವಾರ ಶ್ರೀ ಸಂತ ಸೇವಾಲಾಲ ಮಹಾರಾಜರ ಜಯಂತಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ತಹಸೀಲ್ದಾರ ಧನಂಜಯ ಎಂ., ಬಂಜಾರ ಸಮಾಜದ ಮುಖಂಡರಾದ ಸುಭಾಷ ಗುಡಿಮನಿ, ರಾಜು ಡಾವಣಗೇರಿ, ನಾಗರಾಜ ಗುಡಿಮನಿ, ಈರಣ್ಣ ಗಟ್ಟಿ, ನಾಗರಾಜ ಹೊಂಬಳ, ಕಾರ್ಯಾಲಯದ ಸಿಬ್ಬಂದಿ ಮತ್ತು ವಿವಿಧ ಸಂಘಟನೆಯ ಮುಖಂಡರು ಹಾಜರಿದ್ದರು.



■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಗಜೇಂದ್ರಗಡ ಸಮೀಪದ ಮುಶಿಗೇರಿ ಗ್ರಾಮ ಪಂಚಾಯಿತಿಯಲ್ಲಿ ಗುರುವಾರ ಸಂತ ಸೇವಾಲಾಲರ ಜಯಂತಿಯನ್ನು ಆಚರಿಸಲಾಯಿತು. ಗ್ರಾ.ಪಂ ಅಧ್ಯಕ್ಷ ರಾಜಶೇಖರ ಮಾಲಗಿತ್ತಿ, ಪಿಡಿಓ ಮಂಜುನಾಥ ಮೇಟಿ, ಚಂದಪ್ಪ ಗುಡದೂರ, ಕಳಕಪ್ಪ ಸೂಡಿ, ರಾಯಪ್ಪ ಮಾದರ, ಸತೀಶ ಮತ್ತಿತರರು ಇದ್ದರು.

## ಫೆ. 18ರಂದು ಪರೀಕ್ಷಾ ಕೇಂದ್ರಗಳ ಸುತ್ತಲೂ ನಿಷೇದಾಜ್ಞೆ ಜಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಡಿ ಕಾರ್ಯನಿರ್ವಹಿಸುತ್ತಿರುವ ವಿವಿಧ ವಸತಿ ಸಂಘದ ವ್ಯಾಪ್ತಿಯಡಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ, ಡಾ.ಬಿ.ಆರ್ ಅಂಬೇಡ್ಕರ್, ಅಟಲ್ ಬಿಹಾರಿ ವಾಜಪೇಯಿ, ಶ್ರೀಮತಿ ಇಂದಿರಾ ಗಾಂಧಿ, ಏಕಲವ್ಯ, ಮಾದರಿ ವಸತಿ ಶಾಲೆಗಳಲ್ಲಿ 6ನೇ ತರಗತಿ ಪ್ರವೇಶಾತಿಗೆ ಲಭ್ಯವಿರುವ ಸೀಟುಗಳಿಗೆ ಪರೀಕ್ಷೆಯನ್ನು ಫೆಬ್ರವರಿ 18 ರಂದು ನಡೆಸಲಿದೆ.

ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು, ಶಾಂತಿ ಸುವ್ಯವಸ್ಥಿತೆ ಕಾಪಾಡುವ ಹಿತದೃಷ್ಟಿಯಿಂದ ಫೆಬ್ರವರಿ 18ರಂದು ಜಿಲ್ಲೆಯ 20 ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿ ಬೆ.11 ಗಂಟೆಯಿಂದ ಮದ್ಯಾಹ್ನ 1 ಗಂಟೆವರೆಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ.

ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು ಅಥವಾ ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ನಿರ್ಬಂಧಿಸಲಾಗಿದೆ. ಈ ಪ್ರದೇಶದ ವ್ಯಾಪ್ತಿಯಲ್ಲಿ ಬರುವ ಝರಾ-ಕ್ಸ್ ಅಂಗಡಿ, ಬುಕ್ ಸ್ಟಾಲ್, ಫೋಟೋ ಕಾಪಿಯರ್‌ಗಳನ್ನು ಬಂದ ಮಾಡಲು ಆದೇಶಿಸಿದೆ. ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್ ಫೋನ್ ಮತ್ತು ಇತರೇ ಸಂಪರ್ಕ ಸಲಕರಣೆಗಳನ್ನು ತರುವುದು ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಮತ್ತು ಜಿಲ್ಲಾ ದಂಡಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಫೋನ್ ಇನ್ ಕಾರ್ಯಕ್ರಮದಲ್ಲಿ ಜಿ.ಎಲ್ ಬಾರಾಟಕ್ಕೆ

## ಗಣಿತ ಕಬ್ಬಿಣದ ಕಡಲೆಯಲ್ಲ

■ವಿಜಯಸಾಕ್ಷಿ ಸುದ್ದಿ, ಗದಗ

ಶಹರ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ವತಿಯಿಂದ ಗುರುವಾರ ನಡೆದ ನಾಲ್ಕನೇ ದಿನದ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಫೋನ್ ಇನ್ ಕಾರ್ಯಕ್ರಮ ಹೆಚ್ಚು ಮಕ್ಕಳ ಭಾಗವಹಿಸುವಿಕೆಯೊಂದಿಗೆ ಯಶಸ್ವಿಯಾಯಿತು. ಗಣಿತ ವಿಷಯದ ಫೋನ್ ಇನ್ ಕಾರ್ಯಕ್ರಮದಲ್ಲಿ ಮಕ್ಕಳು, ಉತ್ಸಾಹದಿಂದ ಭಾಗವಹಿಸಿ ಶಿಕ್ಷಕರಿಂದ ಪರಿಹಾರ ಕಂಡುಕೊಂಡರು.

ವಿದ್ಯಾರ್ಥಿಗಳು ಹೆಚ್ಚಾಗಿ ಅನ್ವಯಿಕ ಪ್ರಶ್ನೆಗಳು, ಓಜಿವ್ ರಚನೆ, ರೇಖಾತ್ಮಕ ನಕ್ಷೆ ರಚನೆ, ಸೂತ್ರಗಳನ್ನು ನೆನಪಿಟ್ಟುಕೊಳ್ಳುವ ಬಗೆ, ಘನಫಲಗಳ ವಿಸ್ತೀರ್ಣ, ತ್ರಿಕೋನಮಿತಿ ಮುಂತಾದವುಗಳ ಬಗ್ಗೆ ಪ್ರಶ್ನೆಗಳನ್ನು ಕೇಳಿ ಪರಿಹಾರ ಪಡೆದುಕೊಂಡರು.

ಡಯಟ್ ಪ್ರಾಚಾರ್ಯ, ಉಪನಿರ್ದೇಶಕ (ಅಭಿವೃದ್ಧಿ) ಜಿ.ಎಲ್ ಬಾರಾಟಕ್ಕೆ ಮಾತನಾಡಿ, ಗಣಿತ ವಿಷಯದ ಬಗ್ಗೆ ವಿದ್ಯಾರ್ಥಿಗಳಿಗೆ ಭಯ ಮತ್ತು ಆತಂಕವಿರುತ್ತದೆ. ಆದರೆ ಗಣಿತ ಎನ್ನುವುದು ಮನುಷ್ಯನನ್ನು ಸದಾ ಚಟುವಟಿಕೆಯುಳ್ಳವನನ್ನಾಗಿ ಮಾಡುವ



ಒಂದು ವಿಷಯವಾಗಿದೆ. ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಗಣಿತ ವಿಷಯದಲ್ಲಿ ನಿಖರವಾಗಿ ಅಂಕಗಳನ್ನು ತೆಗೆದುಕೊಳ್ಳುತ್ತೇನೆಂದು ಆತ್ಮವಿಶ್ವಾಸದಿಂದ ಹೇಳಬಹುದು. ಆದರೆ ಇತರೆ ವಿಷಯಗಳಲ್ಲಿ ಹಾಗಾಗದು. ಗಣಿತ ವಿಷಯದಲ್ಲಿ ಹಿಡಿತ ಸಾಧಿಸಿದವರು ಲೆಕ್ಕಾಚಾರದ ಜೀವನವನ್ನು ನಡೆಸಲು ಸಮರ್ಥರಾಗುತ್ತಾರೆ.

ವಿದ್ಯಾರ್ಥಿಗಳು ಗಣಿತ ವಿಷಯದ ಬಗ್ಗೆ ಅಸಡ್ಡೆ, ಅನಾದರ ತೋರಿಸದೇ ಆಸಕ್ತಿಯಿಂದ ಪ್ರಮೇಯಗಳನ್ನು, ಆಕೃತಿಗಳನ್ನು, ಬೀಜಗಣಿತದ ಸಮೀಕರಣಗಳನ್ನು ಬಿಡಿಸಿ ಅಂಕಗಳನ್ನು ಹೆಚ್ಚಿಸಿಕೊಳ್ಳಲು ಈ ವಿಷಯ ಸಹಾಯಕಾರಿಯಾಗಿದೆ. ಗಣಿತ ಕಬ್ಬಿಣದ ಕಡಲೆಯಲ್ಲ, ಅದೊಂದು ಮನೋವಿಕಾಸದ ಆಟವಾಗಿದ್ದು, ಮಕ್ಕಳು ಹೆಚ್ಚಾಗಿ ಆಸಕ್ತಿಯಿಂದ ಗಣಿತ ವಿಷಯವನ್ನು ಕಲಿಯಬೇಕೆಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಬುರಡಿ ಮಾತನಾಡಿ, ವಿದ್ಯಾರ್ಥಿಗಳು ವರ್ಷದ ಪ್ರಾರಂಭದಿಂದ ಬರೆದ ವಿವಿಧ ಪರೀಕ್ಷೆಗಳಲ್ಲಿ ತಾವು ಬರೆಯಲು ಸಾಧ್ಯವಾಗದ, ತಪ್ಪು ಬರೆದ ಹಾಗೂ ಬರೆಯದೇ ಬಿಟ್ಟ ಪ್ರಶ್ನೆಗಳನ್ನು ತಮ್ಮ ಕೃತಿ ಸಂಪುಟದ ಉತ್ತರ ಪತ್ರಿಕೆಗಳಿಂದ ಗುರುತಿಸಿಕೊಂಡು ತೆರೆದ ಪುಸ್ತಕದ ಮಾದರಿಯಲ್ಲಿ ಅವುಗಳನ್ನು ಓದಿ ಮನನ ಮಾಡಿಕೊಳ್ಳುವಂತೆ ಹಾಗೂ ಶಿಕ್ಷಕರು ಕೂಡಾ ಇದೇ ಹಿನ್ನೆಲೆಯಲ್ಲಿ ಮಾರ್ಗದರ್ಶನ ಮಾಡುವಂತೆ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಸಂಪನ್ಮೂಲ ಶಿಕ್ಷಕರಾಗಿ ಸಿ.ಎಸ್ ಮಾನ್ವಿ, ವಿ.ಕೆ. ಪುರಾಣಿಕ, ಶರಣು ಗೌರಿ, ಜ್ಯೋತಿ ಶೆಟ್ಟರ, ಸಾದಿಯಾ ಬರ್ಜಿಸ್ ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಕ್ಷೇತ್ರ ಸಮನ್ವಯಾಧಿಕಾರಿ ಹೆಚ್.ಎ. ಫಾರೂಕಿ, ಶಿಕ್ಷಣ ಸಂಯೋಜಕರಾದ ಶ್ಯಾಮು ಲಾಂಡೆ, ಐ.ಬಿ. ಮಡಿವಾಳರ, ಕ್ಷೇತ್ರ ಸಂಪನ್ಮೂಲ ವ್ಯಕ್ತಿಗಳಾದ ಪಿ.ಡಿ. ಮಂಗಳೂರ ಹಾಗೂ ತೋಂಟದಾರ್ಯ ಪ್ರೌಢಶಾಲೆಯ ಶಿಕ್ಷಕ ಕೆ.ಎಮ್. ಗೌಡರ ಹಾಗೂ ತೋಂಟದಾರ್ಯ ಪ್ರಾಥಮಿಕ ಶಾಲೆಯ ಪ್ರಧಾನ ಗುರುಗಳಾದ ನಾಗರಾಜ ಗಾಳಿ ಉಪಸ್ಥಿತರಿದ್ದರು.

ಫೋನ್ ಇನ್ ಕಾರ್ಯಕ್ರಮದಲ್ಲಷ್ಟೇ ಅಲ್ಲದೆ, ಪರೀಕ್ಷೆ ಪ್ರಾರಂಭವಾಗುವ ಹಿಂದಿನ ದಿನದವರೆಗೂ ಮಕ್ಕಳು ತಾವು ಓದುವಾಗ ಬರೆಯುವಾಗ ಏನಾದರೂ ಗೊಂದಲಗಳು ಅಥವಾ ಸಂದೇಹಗಳು ಹಾಗೂ ಸಮಸ್ಯೆಗಳು ಕಂಡು ಬಂದಲ್ಲಿ ಪ್ರತಿದಿನ ಸಾಯಂಕಾಲ 5.30ರಿಂದ 6.30ರ ಒಳಗೆ ಸಂಪನ್ಮೂಲ ಶಿಕ್ಷಕರಿಗೆ ದೂರವಾಣಿ ಮೂಲಕ ಸಂಪರ್ಕಿಸಿ ಸಮಸ್ಯೆಗಳನ್ನು ಪರಿಹರಿಸಿಕೊಳ್ಳಬಹುದು ಎಂದು ಸಂಪನ್ಮೂಲ ಶಿಕ್ಷಕರು ತಿಳಿಸಿದರು.

## ಹಿರಿಯ ನಾಗರಿಕರಿಗೆ ಸಾಧನಗಳ ವಿತರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಗುರುವಾರದಂದು ಭಾರತೀಯ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯ, ಭಾರತೀಯ ಕೃತಕ ಅಂಗಗಳ ಉತ್ಪಾದನಾ ನಿಗಮದ ಸಹಯೋಗದಲ್ಲಿ ಜರುಗಿದ ರಾಷ್ಟ್ರೀಯ ವಯೋಶ್ರೀ ಯೋಜನೆಯಡಿಯಲ್ಲಿ ಹಿರಿಯ ನಾಗರಿಕರ ದೈನಂದಿನ ಜೀವನ ಸಹಾಯ ಸಾಧನಗಳನ್ನು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ವಿತರಿಸಿದರು.

ಕಾರ್ಯಕ್ರಮದಲ್ಲಿ ಶ್ರವಣ ಯಂತ್ರ, ಊರುಗೋಲು, ಚಕ್ರ, ಕುರ್ಚಿ ಸಹಾಯ ಸಾಧನಗಳನ್ನು ವಿವಿಧ ತಾಲೂಕಿನಿಂದ ಬಂದ ಫಲಾನುಭವಿಗಳಿಗೆ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಅಂಗವಿಕಲ ಕಲ್ಯಾಣ ಅಧಿಕಾರಿಗಳಾದ ಮಹಾಂತೇಶ.ಕೆ. ಮಾದಕ ದ್ರವ್ಯ ತಡೆ ವಿಭಾಗದ ಸಹಾಯಕ ವಿಭಾಗಾಧಿಕಾರಿಗಳಾದ ಪ್ರತೀಕ ಯಾದವ, ಭಾರತೀಯ ಕೃತಕ ಅಂಗಗಳ ಉತ್ಪಾದನಾ ನಿಗಮದ ಆರ್ ಆರ್ & ಓ ಗಳಾದ ಆದರ್ಶಸಿಂಗ್ ಹಾಜರಿದ್ದರು.

ಕಾರ್ಯಕ್ರಮವನ್ನು ಜಿಲ್ಲಾ ಅಂಗವಿಕಲರ ಪುನರ್ವಸತಿ ಕೇಂದ್ರದ ನೋಡಲ್ ಅಧಿಕಾರಿಗಳಾದ ಪ್ರಕಾಶ ಗಾಣಿಗೇರ ನಿರೂಪಿಸಿ ವಂದಿಸಿದರು.

### ಸಂವಿಧಾನ ಜಾಗೃತಿ ರಥಕ್ಕೆ ರಾಮಗಿರಿ ಗ್ರಾಮದಲ್ಲಿ ವೈಭವದ ಸ್ವಾಗತ

## ಸಂವಿಧಾನ ಪ್ರಜಾಪ್ರಭುತ್ವ ವ್ಯವಸ್ಥೆಯ ಚೌಕಟ್ಟು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾ.ಪಂ ಲಕ್ಷ್ಮೇಶ್ವರ, ಜಿ.ಪಂ ಗದಗ ಹಾಗೂ ಸಮಾಜ ಕಲ್ಯಾಣ ಇಲಾಖೆ ಗದಗ ಇವರ ವತಿಯಿಂದ ತಾಲೂಕಿನ ರಾಮಗಿರಿ ಗ್ರಾಮದಲ್ಲಿ ನಡೆದ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮವು ಬುಧವಾರ ಯಶಸ್ವಿಯಾಗಿ ಜರುಗಿತು.

ಪಟ್ಟಣದ ಮುನ್ಸಿಪಲ್ ಕಲಾ ಮಹಾವಿದ್ಯಾಲಯದ ಉಪನ್ಯಾಸಕ ಎಚ್.ಎನ್. ಕೆರೂರ ಉಪನ್ಯಾಸ ನೀಡಿ, ಸಂವಿಧಾನವು ದೇಶದ ಜನರನ್ನು ಆಳುವ ಸರಕಾರದ ಮೂಲ ರಚನೆಯನ್ನು ನಿರ್ದಿಷ್ಟಪಡಿಸುತ್ತದೆ. ಅದು ಕಾರ್ಯಾಂಗ, ಶಾಸಕಾಂಗ ಮತ್ತು ನ್ಯಾಯಾಂಗಗಳನ್ನು ಸರಕಾರದ ಮೂರು ಮುಖ್ಯ ಅಂಗಗಳಾಗಿ ಏರ್ಪಡಿಸುತ್ತದೆ. ಸಂವಿಧಾನವು ಪ್ರತಿ ಅಂಗದ ಅಧಿಕಾರದ ವ್ಯಾಖ್ಯೆಯನ್ನು ನೀಡುವುದಲ್ಲದೆ ಅವುಗಳ ಜವಾಬ್ದಾರಿಯನ್ನೂ ಖಚಿತಗೊಳಿಸುತ್ತದೆ. ಇಡೀ ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಶಾಸನಬದ್ಧವಾಗಿ, ನ್ಯಾಯಬದ್ಧವಾಗಿ ನಡೆಸಿಕೊಂಡು ಹೋಗಲು ಇರುವ ಅದ್ಭುತ ಚೌಕಟ್ಟು ಸವಿಂಧಾನವಾಗಿದೆ ಎಂದು ತಿಳಿಸಿದರು.

ಕಾಯಕ್ರಮದ ಅಧ್ಯಕ್ಷತೆಯನ್ನು ಗ್ರಾ.ಪಂ ಅಧ್ಯಕ್ಷೆ ಅಡಿವೆಕ್ಕ ಬೆಟಗೇರಿ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಗ್ರಾಮದ ಹಿರಿಯರಾದ ಸೋಮಣ್ಣ ಬೆಟಗೇರಿ, ನೀಲೇಶಪ್ಪ ಕಾಳೆ, ಕೆ.ಬಿ. ಪಾಟೀಲ, ಈರಮ್ಮ ಮಡಿವಾಳರ, ಗ್ರಾ.ಪಂ ಸದಸ್ಯರಾದ ಅಶೋಕ ಕಾಳಿ, ಯಲ್ಲಪ್ಪ ಬೆಟಗೇರಿ, ಚಿದಾನಂದ



ಬುಧವಾರ ಸಂಜೆಯ ವೇಳೆಗೆ ರಾಮಗಿರಿ ಪ್ರವೇಶಿಸಿದ ಜಾಗೃತಿ ಜಾಥಾವನ್ನು ಅದ್ದೂರಿಯಾಗಿ ಸ್ವಾಗತಿಸಲಾಯಿತು. ರಂಗೋಲಿಯ ಚಿತ್ತಾರದಿಂದ ಕೂಡಿದ ಗ್ರಾಮದ ಮುಖ್ಯ ರಸ್ತೆಗಳಲ್ಲಿ ಶಾಲಾ ಮಕ್ಕಳ ವೇಷಭೂಷಣ, ಗ್ರಾಮದ ಅಂಬೇಡ್ಕರ ಯುವಕ ಸಂಘದ ಮಜಲುಗಳೊಂದಿಗೆ ವೈಭವದಿಂದ ನಡೆಯಿತು. ವಿವಿಧ ಸ್ಪರ್ಧೆಗಳಲ್ಲಿ ಪಾಲ್ಗೊಂಡಿದ್ದ ಶಾಲಾ ಮಕ್ಕಳಿಗೆ ಬಹುಮಾನ ವಿತರಿಸಲಾಯಿತು.

ಮಲ್ಲೂರ, ಅಣ್ಣಪ್ಪ ವಾಲ್ಮೀಕಿ, ರೇಣುಕಾ ಲಕ್ಕಣ್ಣವರ, ಅನ್ನಪೂರ್ಣ ಪೂಜಾರ, ಕವಿತಾ ಯಂಗಾಡಿ, ಕಮಲವ್ವ ತುಂಬಣ್ಣವರ, ಪಿಡಿಓ ಬಿ.ಬಿ. ತಳವಾರ, ಕಾರ್ಯದರ್ಶಿ ಎಂ.ಎಚ್. ನದಾಫ ಹಾಗೂ ಗ್ರಾಮದ ಗುರು-ಹಿರಿಯರು, ಅಂಗನವಾಡಿ ಮತ್ತು ಆಶಾ ಕಾರ್ಯಕರ್ತೆಯರು, ಸ್ತ್ರೀ-ಶಕ್ತಿ ಸಂಘಗಳ ಸದಸ್ಯರು, ರಾಮಗಿರಿ ಗ್ರಾಮದ ಪ್ರೌಢ/ಪ್ರಾಥಮಿಕ ಶಾಲಾ ಶಿಕ್ಷಕ ವೃಂದ ಮತ್ತು ಗ್ರಾ.ಪಂ ಸಿಬ್ಬಂದಿಗಳು ಭಾಗವಹಿಸಿದ್ದರು.

ಕಾರ್ಯಕ್ರಮದ ನೋಡಲ್ ಅಧಿಕಾರಿ ಡಾ. ಎನ್.ಎ. ಹವಳದ ಸ್ವಾಗತಿಸಿದರು. ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಶರಣಯ್ಯ ಕುಲಕರ್ಣಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಿಕ್ಷಕಿ ಮೈತ್ರಾದೇವಿ ಸಾಲಿಮಠ ನಿರೂಪಿಸಿದರು. ಹಾಸ್ಟೆಲ್ ಮೇಲ್ವಿಚಾರಕರಾದ ಎಚ್.ಎಂ. ಅರಳಿಹಳ್ಳಿ ವಂದಿಸಿದರು.

## ನಾಳಿನ ಒಣಮೆಣಸಿನಕಾಯಿ ಟೆಂಡರ್ ಸ್ಥಗಿತ



■ವಿಜಯಸಾಕ್ಷಿ ಸುದ್ದಿ, ಗದಗ

ಕಳೆದ ಶನಿವಾರ ಮತ್ತು ಬುಧವಾರ ಟೆಂಡರ್ ಮೂಲಕ ಮಾರಾಟವಾದ ಒಣಮೆಣಸಿನಕಾಯಿ ಇನ್ನೂ ಮಾರುಕಟ್ಟೆಯಲ್ಲಿ ಬಟವಾಡೆ ಆಗದೇ ಹಾಗೆಯೇ ಉಳಿದಿದೆ. ಅಲ್ಲದೇ ಸುಕ್ಷೇತ್ರ ಬಳಗಾನೂರಿನಲ್ಲಿ ಮೌನತಪಸ್ವಿ ಚಿಕೇನಕೊಪ್ಪದ ಶ್ರೀ ಚನ್ನವೀರಶರಣರ ಮಠದ ಜಾತ್ರೆಯೂ ಇರುವುದರಿಂದ ಟೆಂಡರ್‌ನಲ್ಲಿ ಭಾಗವಹಿಸಲು ತೊಂದರೆಯಾಗಲಿದ್ದುಮ ದಲಾಲರು ಮತ್ತು ಖರೀದಿದಾರರು ಸಭೆ ಮಾಡಿ ಶನಿವಾರ ಟೆಂಡರನ್ನು ಸ್ಥಗಿತಗೊಳಿಸಲು ನಿರ್ಧರಿಸಿದ್ದಾರೆ.

ಕಾರಣ, ಫೆ. 17ರಂದು ಒಣಮೆಣಸಿನಕಾಯಿ ಟೆಂಡರ್ ಪ್ರಕ್ರಿಯೆಯನ್ನು ಬಂದ್ ಮಾಡಲು ನಿರ್ಧರಿಸಲಾಗಿದೆ. ಮುಂದಿನ ವಾರ ಯಥಾ ಪ್ರಕಾರ ಟೆಂಡರ್ ಪ್ರಕ್ರಿಯೆ ಜರುಗಲಿದ್ದು, ರೈತ ಬಾಂಧವರು ಸಹಕರಿಸಬೇಕೆಂದು ಗದುಗಿನ ಒಣಮೆಣಸಿನಕಾಯಿ ದಲಾಲ ವರ್ತಕರ ಸಂಘದ ಅಧ್ಯಕ್ಷ ಚಂದ್ರು ಬಾಳಿಹಳ್ಳಿಮಠ ಮತ್ತು ಕಾರ್ಯದರ್ಶಿ ಪುಂಡಲೀಕಪ್ಪ ಕಂಬಿಯವರು ಪತ್ರಿಕಾ ಪ್ರಕಟಣೆಯ ಮೂಲಕ ವಿನಂತಿಸಿಕೊಂಡಿದ್ದಾರೆ.

## ಸೇವಾಲಾಲರು ಹಾಕಿಕೊಟ್ಟ ಸನ್ಮಾರ್ಗದಲ್ಲಿ ನಡೆಯೋಣ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಂತ ಸೇವಾಲಾಲ್ ಮಹಾರಾಜರು ಜನರಲ್ಲಿನ ಅಜ್ಞಾನ, ಮೂಢನಂಬಿಕೆ, ಕಂದಾಚಾರಗಳನ್ನು ಹೋಗಲಾಡಿಸಿ ಸುಜ್ಞಾನದ ಬೆಳಕು ಮೂಡಿಸಿದ್ದಾರೆ. ಅವರ ತತ್ವಾದರ್ಶ, ಚಿಂತನೆಗಳು ಇಡೀ ಮನುಕುಲಕ್ಕೆ ದಾರಿದೀಪವಾಗಿವೆ ಎಂದು ತಹಸೀಲ್ದಾರ ವಾಸುದೇವ ಸ್ವಾಮಿ ಹೇಳಿದರು.

ಅವರು ಗುರುವಾರ ಪಟ್ಟಣದ ತಹಸೀಲ್ದಾರ ಕಾರ್ಯಾಲಯದಲ್ಲಿ ಸಂತ ಸೇವಾಲಾಲ ಮಹಾರಾಜರ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಮಾತನಾಡಿ, ಸಂತ ಸೇವಾಲಾಲ್ ಮಹಾರಾಜರು ಲಂಬಾಣಿ ಜನರಲ್ಲಿನ ಅಜ್ಞಾನ, ಮೂಢನಂಬಿಕೆಗಳನ್ನು



ಹೋಗಲಾಡಿಸಿ ಅವರಲ್ಲಿ ಸುಜ್ಞಾನದ ಬೆಳಕು ಮೂಡಿಸಿದ ಆರಾಧ್ಯ ದೈವವಾಗಿದ್ದಾರೆ. ಅವರು ಲೋಕ ಸಂಚಾರದ ಮೂಲಕ ಜನರ ಕಷ್ಟ-ಕಾರ್ಪಣ್ಯಗಳನ್ನು ದೂರಮಾಡಿ ಸಾಮಾಜಿಕ ಚಿಂತನೆಯಲ್ಲಿಯೇ ಬದುಕನ್ನು ಸಮರ್ಪಿಸಿದ ಅವರು ಹಾಕಿಕೊಟ್ಟ ಸನ್ಮಾರ್ಗದಲ್ಲಿ ಎಲ್ಲರೂ ಸಾಗಬೇಕಾಗಿದೆ ಎಂದರು.

ಈ ವೇಳೆ ಬಂಜಾರ ಕಲ್ಯಾಣ ಸಂಘದ ತಾಲೂಕಾಧ್ಯಕ್ಷ ದೀಪಕ ಲಮಾಣಿ, ಶೇಖಪ್ಪ ಲಮಾಣಿ, ಸೋಮಪ್ಪ ಲಮಾಣಿ, ಮಹೇಶ ಲಮಾಣಿ, ನಾನಪ್ಪ ಲಮಾಣಿ ಸೇರಿ ಸಮಾಜ ಬಾಂಧವರು, ಕಂದಾಯ, ಸಮಾಜ ಕಲ್ಯಾಣ ಇಲಾಖೆಯ ಸಿಬ್ಬಂದಿ ಇದ್ದರು. ಪಟ್ಟಣದ ತಾ.ಪಂ ಕಾರ್ಯಾಲಯ, ಪುರಸಭೆ, ಕೆಇಬಿ, ಡಿಪೋ ಸೇರಿ ಸರ್ಕಾರಿ ಕಚೇರಿ, ಶಾಲಾ-ಕಾಲೇಜುಗಳಲ್ಲಿ ಸೇವಾಲಾಲ್ ಮಹಾರಾಜರ ಜಯಂತಿ ಆಚರಿಸಲಾಯಿತು.

## ಹುತಾತ್ಮ ಯೋಧರಿಗೆ ಶ್ರದ್ಧಾಂಜಲಿ



■ವಿಜಯಸಾಕ್ಷಿ ಸುದ್ದಿ, ಗದಗ

ಜಮ್ಮು-ಕಾಶ್ಮೀರದ ಪುಲ್ವಾಮದಲ್ಲಿ ಉಗ್ರರ ಗುಂಡಿಗೆ ಬಲಿಯಾದ 40 ಜನ ಸಿಆರ್‌ಎಫ್‌ಎನ್ ಹುತಾತ್ಮ ವೀರ ಯೋಧರಿಗೆ ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಜಿಲ್ಲಾಧ್ಯಕ್ಷ ಬಸಲಿಂಗಪ್ಪ ಮುಂಡರಗಿ ನೇತೃತ್ವದಲ್ಲಿ ಗದಗಿನ ತೋಂಟದಾರ್ಯ ಮಠದಿಂದ ಮಹಾತ್ಮ ಗಾಂಧಿ ಸರ್ಕಲ್‌ವರೆಗೆ ಮೌನಯಾತ್ರೆಯೊಂದಿಗೆ ಪಂಜಿನ ಮೆರವಣಿಗೆಯ ಮೂಲಕ ನಗರದ ಮಹಾತ್ಮ ಗಾಂಧಿ ಸರ್ಕಲ್‌ನಲ್ಲಿ ಹುತಾತ್ಮ ವೀರ ಯೋಧರಿಗೆ ಶ್ರದ್ಧಾಂಜಲಿ ಹಾಗೂ ಪುಷ್ಪ ನಮನ ಸಲ್ಲಿಸಲಾಯಿತು.

ಪ್ರತಿ ವರ್ಷ ಫೆಬ್ರವರಿ 14 ಭಾರತೀಯರಿಗೆ ಕರಾಳ ದಿನ. 40 ಮನೆಗಳನ್ನು ಬೆಳಗುತ್ತಿದ್ದ ದೀಪಗಳು ಆರಿದ ದಿನವಾಗಿದೆ. ಆ ಭೀಕರ ಪುಲ್ವಾಮಾ ದಾಳಿ ನಡೆದು ಇಂದಿಗೆ 5 ವರ್ಷಗಳು ಗತಿಸಿದವು. ಈ ಹಿನ್ನೆಲೆಯಲ್ಲಿ ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಗದಗ ಜಿಲ್ಲಾ ಘಟಕದ ಸರ್ವ ಸದಸ್ಯರು, ವೀರನಾರಿಯರು, ಅರೆಸೇನಾ ಪಡೆಗಳ ಯೋಧರು, ಸಮಸ್ತ ಹಾಲಿ ಮತ್ತು ಮಾಜಿ ಸೈನಿಕ ಕುಟುಂಬದವರೆಲ್ಲರೂ ಸೇರಿ ಹುತಾತ್ಮ ವೀರ ಯೋಧರ ಆತ್ಮಕ್ಕೆ ಚಿರಶಾಂತಿಯನ್ನು ನೀಡಲಿ ಎಂದು ಶ್ರದ್ಧಾಂಜಲಿ ಸಲ್ಲಿಸಲಾಯಿತು.

## ಹಾಲುಮತ ಸಮಾಜದಿಂದ ಸಿಪಿಐಗೆ ಮನವಿ



■ವಿಜಯಸಾಕ್ಷಿ ಸುದ್ದಿ, ರೋಣ

ಮರಳು ದಂಧೆಯ ಹಣಕಾಸಿನ ವಿಚಾರಕ್ಕೆ ಸಂಬಂಧಿಸಿ ತಾಲೂಕಿನ ಹಿರೇಹಾಳ ಗ್ರಾಮದ ವೈದ್ಯ, ಕಾಂಗ್ರೆಸ್ ಮುಖಂಡ ಡಾ.ಶಶಿಧರ ಹಟ್ಟಿ ಡೆತ್‌ನೋಟ್ ಬರೆದಿಟ್ಟು ನೇಣಿಗೆ ಶರಣಾಗಿದ್ದರು. ಈ ಹಿನ್ನೆಲೆಯಲ್ಲಿ ರೋಣ, ಗಜೇಂದ್ರಗಡ ತಾಲೂಕಿನ ಹಾಲುಮತ ಸಮಾಜದ ಮುಖಂಡರು ಬುಧವಾರ ರಾತ್ರಿ ಸಿಪಿಐ ಎಸ್.ಎಸ್. ಬಳಗಿಯವರಿಗೆ ಮನವಿ ಸಲ್ಲಿಸಿ, ಆರೋಪಿಯನ್ನು ಶೀಘ್ರ ಬಂಧಿಸಬೇಕು ಎಂದು ಮನವಿ ಸಲ್ಲಿಸಿದರು.

ತಾಲೂಕಾಧ್ಯಕ್ಷ ಬಸವರಾಜ ಜಗ್ಗಲ ಮಾತನಾಡಿ, ಆತ್ಮಹತ್ಯೆ ಮಾಡಿಕೊಂಡಿರುವ ವೈದ್ಯ ಶಶಿಧರ ಹಟ್ಟಿಯವರು ಡೆತ್‌ನೋಟ್‌ನಲ್ಲಿ ಆರೋಪಿತನ ಹೆಸರು ಬರೆದಿದ್ದಾರೆ. ಅವರ ಪತ್ನಿ ಕೂಡ ಶರಣಗೌಡ ಪಾಟೀಲರ ವಿರುದ್ಧ ದೂರು ನೀಡಿದ್ದಾರೆ. ಆರೋಪಿಯನ್ನು ಕೂಡಲೇ ಬಂಧಿಸುವ ಮೂಲಕ ಕುಟುಂಬಕ್ಕೆ ಹಾಗೂ ಸಮಾಜಕ್ಕೆ ನ್ಯಾಯ ಒದಗಿಸಬೇಕು ಎಂದು ವಿನಂತಿಸಿದರು.

ಮನವಿ ಸ್ವೀಕರಿಸಿ ಮಾತನಾಡಿದ ಸಿಪಿಐ ಎಸ್. ಎಸ್. ಬಿಳಗಿ, ಆರೋಪಿಯನ್ನು ಬಂಧಿಸಲು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಮಾರ್ಗದರ್ಶನದಲ್ಲಿ ವಿಶೇಷ ತಂಡವನ್ನು ರಚಿಸಲಾಗಿದ್ದು, ಶೀಘ್ರವೇ ಆರೋಪಿಯನ್ನು ಬಂಧಿಸಲಾಗುವುದು. ಪೊಲೀಸ್ ಇಲಾಖೆ ಯಾವುದೇ ಒತ್ತಡಕ್ಕೆ ಮಣಿದಿಲ್ಲ ಎಂದರು.

ಗಜೇಂದ್ರಗಡ ತಾಲೂಕಾಧ್ಯಕ್ಷ ಅಂದಪ್ಪ ಬಿಚ್ಚೂರ, ಮುತ್ತಣ್ಣ ಕೊಪ್ಪಳ, ಅಶೋಕ ಕೊಪ್ಪದ, ಬಸವರಾಜ ಯರಗೊಪ್ಪ, ಮಲ್ಲಿಕಾರ್ಜುನ ಬೇವಿನಮರದ, ಈಶಪ್ಪ ಜಗ್ಗಲ ಸೇರಿದಂತೆ ಸಮಾಜದ ಮುಖಂಡರು ಉಪಸ್ಥಿತರಿದ್ದರು.

## ‘ಕಲಾ ಸಂಭ್ರಮ-2024’ ಕಾರ್ಯಕ್ರಮ ನಾಳೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಶ್ರೀ ಬಸವೇಶ್ವರ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಫೆ.17ರಂದು ಮಧ್ಯಾಹ್ನ 3.30ಕ್ಕೆ ‘ಕಲಾ ಸಂಭ್ರಮ-2024’ ಕಾರ್ಯಕ್ರಮ ಜರುಗಲಿದೆ ಎಂದು ಮುಖ್ಯ ಶಿಕ್ಷಕಿ ಭಾರತಿ ಶಿರ್ಸಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಸಮಾರಂಭದ ದಿವ್ಯ ಸಾನ್ನಿಧ್ಯವನ್ನು ಸಂಸ್ಥೆಯ ಅಧ್ಯಕ್ಷರಾದ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳವರು ವಹಿಸಲಿದ್ದು, ಅಧ್ಯಕ್ಷತೆಯನ್ನು ಶಾಲೆಯ ಚೇರಮನ್ ಡಾ. ಜಿ.ಕೆ. ಕಾಳೆ ವಹಿಸುವರು. ಗಂಗಾವತಿಯ ಸರಕಾರಿ ಪದವಿ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಡಾ. ಶಿವರಾಜ ಗುರಿಕಾರ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳುವ ಈ ಸಮಾರಂಭದಲ್ಲಿ ಸಂಸ್ಥೆಯ ಗೌರವ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ, ಆಡಳಿತಾಧಿಕಾರಿ ಎನ್. ಆರ್. ಗೌಡರ, ಉಚಿತ ಪ್ರಸಾದ ನಿಲಯದ ಚೇರಮನ್ ಮಲ್ಲಿಕಾರ್ಜುನಪ್ಪ ಮೆಣಸಗಿ, ಶಾಲೆಯ ಸದಸ್ಯ ಮಲ್ಲಣ್ಣ ಮೇಟಿ ಮತ್ತು ವೀರಯ್ಯ ವಸ್ತ್ರದ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ಜಿಲ್ಲಾ ಪಂಚಾಯತ, ಗದಗ
ಪ್ರಧಾನ ಮಂತ್ರಿ ಪೋಷಣ್ ಶಕ್ತಿ ನಿರ್ಮಾಣ್, ಜಿಲ್ಲೆ ಗದಗ, ಗದಗ

ಸಂ.ಅ.ದಾ.ಕಾ.ಗ/ಹೊ.ಗು.ಸಿ./ಟೆಂಡರ್/2023-24 ದಿನಾಂಕ: 15-02-2024

ಟೆಂಡರ್ ಪ್ರಕಟಣೆ

(ಇ-ಪ್ರೊಕ್ಯೂರ್‌ಮೆಂಟ್ ಪ್ಲಾಟ್‌ಫಾರಂ ಮೂಲಕ)

ಮಧ್ಯಾಹ್ನ ಉಪಹಾರ ಯೋಜನೆಯಡಿಯಲ್ಲಿನ ಡಾಟಾ ಎಂಟ್ರಿ ಹುದ್ದೆಗಳ ಭರ್ತಿ ಮಾಡಲು ಇ-ಟೆಂಡರ್ ಕರೆಯಲಾಗಿದೆ. ಟೆಂಡರ್ ವಿವರಗಳನ್ನು ಇ-ಪ್ರೊಕ್ಯೂರ್‌ಮೆಂಟ್ ವೆಬ್‌ಸೈಟ್: http://eproc.karnataka.gov.in ನಲ್ಲಿ ಪಡೆಯಬಹುದು. ಇ-ಟೆಂಡರ್ ಸಲ್ಲಿಸಲು ಪ್ರಾರಂಭದ **ದಿನಾಂಕ: 15-02-2024** ರಿಂದ ಕೊನೆಯ **ದಿನಾಂಕ: 22-02-2024** ವರೆಗೆ. ಹೆಚ್ಚಿನ ವಿವರಗಳಿಗಾಗಿ **08372-221757** ನಲ್ಲಿ ಸಂಪರ್ಕಿಸಬಹುದು.

ಸಹಿ/- ಶಿಕ್ಷಣಾಧಿಕಾರಿಗಳು
ಅಕ್ಷರ ದಾಸೋಹ ಕಾರ್ಯಕ್ರಮ
ಜಿಲ್ಲಾ ಪಂಚಾಯತ ಗದಗ

**ವಾ.ಸಾ.ಇ./ಗದಗ/543/ದೇಶಪಾಂಡೆಪಬ್ಲಿಸಿಟಿ/2023-24.**

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka